ಸಂಪುಟ: 11 ಸಂಚಿಕೆ: 159 ಪುಟ: 4+2 ಬೆಲೆ : 3.00 ಮಂಗಳವಾರ ಜುಲೈ 28, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 159 Pages : 4+2 Rate : 3.00 Tuesday July 28, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

### ಪ್ರಧಾನ ಮಂತ್ರಿ ಫಸಲ್ ವಿಮಾ ಯೋಜನೆ ಅಭಿಯಾನಕ್ಕೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಚಾಲನೆ

# ರೈತರು ಕಡ್ಡಾಯವಾಗಿ ಬೆಳೆ ವಿಮೆ ಮಾಡಿಸಿಕೊಳ್ಳಿ

**ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಕೃತಿ ವಿಕೋಪ ಸೇರಿದಂತೆ ವಿವಿಧ ಕಾರಣಗಳಿಂದ ಉಂಟಾಗುವ ಬೆಳೆ ನಷ್ಟದಿಂದ ರೈತರನ್ನು ಆರ್ಥಿಕವಾಗಿ ರಕ್ಷಿಸುವ ಉದ್ದೇಶದಿಂದ ಜಾರಿಯಲ್ಲಿರುವ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ವಿಮಾ ಯೋಜನೆಯ ಮುಂಗಾರು-2026 ಅಭಿಯಾನಕ್ಕೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಸೋಮವಾರ ಜಿಲ್ಲಾಡಳಿತ ಭವನದ ಆವರಣದಲ್ಲಿ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಕೃಷಿಯು ಪ್ರಕೃತಿಯನ್ನು ಅವಲಂಬಿಸಿರುವ ವೃತ್ತಿಯಾಗಿದ್ದು, ಹವಾಮಾನ ವೈಪರೀತ್ಯದಿಂದ ರೈತರಿಗೆ ಅನಿರೀಕ್ಷಿತ ನಷ್ಟ ಉಂಟಾಗುವ ಸಾಧ್ಯತೆ ಹೆಚ್ಚಿರುತ್ತದೆ. ಇಂತಹ ಸಂದರ್ಭಗಳಲ್ಲಿ ರೈತರ ಆರ್ಥಿಕ ಸಂಕಷ್ಟವನ್ನು ಕಡಿಮೆ ಮಾಡುವಲ್ಲಿ ಪ್ರಧಾನ ಮಂತ್ರಿ ಫಸಲ್ ವಿಮಾ ಯೋಜನೆ ಅತ್ಯಂತ ಪರಿಣಾಮಕಾರಿ ಯೋಜನೆಯಾಗಿದ್ದು, ಜಿಲ್ಲೆಯ ಎಲ್ಲ ರೈತರು ಕಡ್ಡಾಯವಾಗಿ ಬೆಳೆ ವಿಮೆ ಮಾಡಿಸಿಕೊಳ್ಳಬೇಕು ಎಂದು ಕರೆ ನೀಡಿದರು. ಯೋಜನೆಯಡಿ ಬೆಳೆ ವಿಮೆ ಮಾಡಿಸಿಕೊಂಡರೆ ಪ್ರಕೃತಿ ವಿಕೋಪ, ಅತಿವೃಷ್ಟಿ,



ಅನಾವೃಷ್ಟಿ, ಗಾಳಿ, ನೆರೆ ಸೇರಿದಂತೆ ವಿವಿಧ ಕಾರಣಗಳಿಂದ ಉಂಟಾಗುವ ಬೆಳೆ ಹಾನಿಗೆ ವಿಮಾ ಪರಿಹಾರ ದೊರೆಯಲಿದ್ದು, ರೈತರ ಆದಾಯದ ಸ್ಥಿರತೆ ಹಾಗೂ ಕೃಷಿ ಚಟುವಟಿಕೆಗಳ ನಿರಂತರತೆಗೆ ಇದು ನೆರವಾಗಲಿದೆ ಎಂದು ಹೇಳಿದರು.

ಬೆಳೆ ವಿಮೆ, ನೋಂದಣಿ ಪ್ರಕ್ರಿಯೆ, ಅರ್ಹತೆ ಹಾಗೂ ಕೊನೆಯ ದಿನಾಂಕದ ಕುರಿತು ಹೆಚ್ಚಿನ ಮಾಹಿತಿಗಾಗಿ ರೈತರು ತಮ್ಮ ವ್ಯಾಪ್ತಿಯ ಕೃಷಿ ಇಲಾಖೆ ಕಚೇರಿಗಳು ಹಾಗೂ ರೈತ ಸಂಪರ್ಕ ಕೇಂದ್ರಗಳನ್ನು ಸಂಪರ್ಕಿಸಬೇಕು. ಅಲ್ಲದೆ 1800 209 4980 ಸಹಾಯವಾಣಿ ಸಂಖ್ಯೆಗೆ ಕರೆ ಮಾಡಿ ಮಾಹಿತಿ ಪಡೆಯಬಹುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕೃಷಿ ಇಲಾಖೆಯಿಂದ ಸಿದ್ಧಪಡಿಸಿರುವ ಬೆಳೆ ವಿಮೆ ಜಾಗೃತಿ ಕರಪತ್ರಗಳು ಹಾಗೂ ಪೋಸ್ಟರ್‌ಗಳನ್ನು ಜಿಲ್ಲಾಧಿಕಾರಿಗಳು

**ಪ್ರಧಾನ ಮಂತ್ರಿ ಫಸಲ್ ವಿಮಾ ಯೋಜನೆಯಡಿ ಬೆಳೆ ವಿಮೆ ಮಾಡಿಸಿಕೊಳ್ಳುವ ಮೂಲಕ ರೈತರು ಪ್ರಕೃತಿ ವಿಕೋಪದಿಂದ ಉಂಟಾಗುವ ಆರ್ಥಿಕ ನಷ್ಟದಿಂದ ರಕ್ಷಣೆ ಪಡೆದುಕೊಳ್ಳಬೇಕು.**

**- ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ, ಗದಗ**

ಬಿಡುಗಡೆ ಮಾಡಿದರು.

ಜಿಲ್ಲಾದ್ಯಂತ ವ್ಯಾಪಕ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಹೆಚ್ಚಿನ ಸಂಖ್ಯೆಯ ರೈತರಿಗೆ ಯೋಜನೆಯ ಸೌಲಭ್ಯ ತಲುಪಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಕಾರ್ಯಕ್ರಮದಲ್ಲಿ ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ಚೇತನಾ ಪಾಟೀಲ, ಉಪ ಕೃಷಿ ನಿರ್ದೇಶಕಿ ಸ್ಫೂರ್ತಿ ಜಿ.ಎಸ್., ಕೃಷಿ ಸಹಾಯಕ ನಿರ್ದೇಶಕ ಮಲ್ಲಯ್ಯ ಕೆ., ತಾಂತ್ರಿಕ ಅಧಿಕಾರಿ ಸಂಜೀವ ಕುಮಾರ, ಕೃಷಿ ಅಧಿಕಾರಿ ಚೆತ್ರಾ ಬಿ.ಎಂ., ವಾರ್ತಾಧಿಕಾರಿ ವಸಂತ ಮಡ್ಲೂರ, ಮಾಂತೇಶ್ ಮದ್ನೂರ, ಕೃಷಿ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ, ಇಂಡಸ್‌ಇಂಡ್ ಜನರಲ್ ಇನ್ಸೂರೆನ್ಸ್ ಕಂಪನಿಯ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ಪ್ರಕಲ್ಪ ಶಾಲೆಯಲ್ಲಿ ವಾದ-ಪ್ರತಿವಾದ ಸ್ಪರ್ಧೆ

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಪ್ರಕಲ್ಪ ಶಿಕ್ಷಣ ಸಂಸ್ಥೆಯ ಪ್ರಾಥಮಿಕ ಹಾಗೂ ಹಿರಿಯ ಪ್ರಾಥಮಿಕ ಆಂಗ್ಲ ಮಾಧ್ಯಮ ಶಾಲೆಯಲ್ಲಿ ವಿದ್ಯಾರ್ಥಿಗಳ ಆತ್ಮವಿಶ್ವಾಸ, ಚಿಂತನಾ ಶಕ್ತಿ ಹಾಗೂ ಭಾಷಾ ಕೌಶಲ್ಯವನ್ನು ಬೆಳೆಸುವ ಉದ್ದೇಶದಿಂದ ವಾದ-ಪ್ರತಿವಾದ ಸ್ಪರ್ಧೆ ಆಯೋಜಿಸಲಾಯಿತು. ಒಂದನೇ ತರಗತಿಯಿಂದ ಎಂಟನೇ ತರಗತಿವರೆಗಿನ ವಿದ್ಯಾರ್ಥಿಗಳು ಉತ್ಸಾಹದಿಂದ ಸ್ಪರ್ಧೆಯಲ್ಲಿ ಭಾಗವಹಿಸಿ ತಮ್ಮ ವಿಚಾರಗಳನ್ನು ಸ್ಪಷ್ಟವಾಗಿ ಮಂಡಿಸುವ ಮೂಲಕ ಪ್ರತಿಭೆಯನ್ನು ಅನಾವರಣ ಗೊಳಿಸಿದರು. ಬಾಲಕಿಯರಿಗೆ ಹೆಚ್ಚಿನ ಸೌಲಭ್ಯವೇ? ಅಥವಾ ಬಾಲಕರಿಗೆ? ಎಂಬ ವಿಷಯದ ಕುರಿತು ನಡೆದ ವಾದ- ಪ್ರತಿವಾದ ಸ್ಪರ್ಧೆ ವಿದ್ಯಾರ್ಥಿಗಳಲ್ಲಿ ಉತ್ತಮ ಚರ್ಚೆ ಗೆ ವೇದಿಕೆಯಾಯಿತು. ಈ ಸಂದರ್ಭದಲ್ಲಿ ಸಂಸ್ಥಾಪಕ ಹಾಗೂ ಅಧ್ಯಕ್ಷ ಎಸ್.ಬಿ. ಹುಬ್ಬಳ್ಳಿ ಮಾತನಾಡಿ, ಪ್ರತಿಯೊಬ್ಬ ವಿದ್ಯಾರ್ಥಿಯಲ್ಲೂ ವಿಶಿಷ್ಟ ಪ್ರತಿಭೆ ಅಡಗಿದ್ದು, ಇಂತಹ ಸ್ಪರ್ಧೆಗಳು ಅವರ ವ್ಯಕ್ತಿತ್ವ ವಿಕಸನಕ್ಕೆ ಸಹಕಾರಿಯಾಗುತ್ತವೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕ-ಶಿಕ್ಷಕಿಯರು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು. ಸ್ಪರ್ಧೆಯಲ್ಲಿ ಭಾಗವಹಿಸಿದ ಎಲ್ಲಾ ವಿದ್ಯಾರ್ಥಿಗಳನ್ನು ಹಾಗೂ ಕಾರ್ಯಕ್ರಮ ಯಶಸ್ವಿಗೊಳಿಸಿದ ಶಿಕ್ಷಕರನ್ನು ಅಭಿನಂದಿಸಲಾಯಿತು.

## ಸಾಧಕರನ್ನು ಗೌರವಿಸಿದ ಅಮ್ಮ ಫೌಂಡೇಶನ್


**ವಿಜಯಸಾಕ್ಷಿ ಸುದ್ದಿ, ಗದಗ**

ಅಮ್ಮ ಫೌಂಡೇಶನ್ (ರಿ.), ಬೆಂಗಳೂರು ವತಿಯಿಂದ ಗದಗ ಜಿಲ್ಲಾ ನೌಕರರ ಭವನದಲ್ಲಿ ತಾಲೂಕು ಮಟ್ಟದ ಸಾಧಕರಿಗೆ ಪ್ರಶಸ್ತಿ ಪ್ರದಾನ ಹಾಗೂ ಸನ್ಮಾನ ಸಮಾರಂಭ ನಡೆಯಿತು.

ಜಿಲ್ಲೆಯ ಪ್ರತಿಯೊಂದು ತಾಲೂಕಿನ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಐವರು ಸಾಧಕರನ್ನು ಗುರುತಿಸಿ ಪ್ರಶಸ್ತಿ ಪ್ರದಾನ ಮಾಡಲಾಯಿತು. ಜೊತೆಗೆ ಸುಮಾರು 300ಕ್ಕೂ ಹೆಚ್ಚು ಸಾಧಕರು ಹಾಗೂ ಎಸ್ ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಕೃಷಿ ಕ್ಷೇತ್ರದ ಸಾಧಕರಿಗೆ ಬಸವ ಕೃಷಿ ರತ್ನ, ಮಾಜಿ ಸೈನಿಕರಿಗೆ ಬಸವನಾಡ ರಕ್ಷಕ ಪ್ರಶಸ್ತಿ, ಶಿಕ್ಷಕರಿಗೆ ಬಸವ ಬೆಳಕು ಪ್ರಶಸ್ತಿ, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಮಹಿಳೆಯರಿಗೆ ಬಸವ ಭಾರತಿ ಪ್ರಶಸ್ತಿ ಹಾಗೂ ಕಲಾವಿದರಿಗೆ ಬಸವ ಕಲಾಶಿಖರ ಪ್ರಶಸ್ತಿ ಪ್ರದಾನ



ಮಾಡಲಾಯಿತು. ಲಕ್ಷ್ಮೇಶ್ವರ ತಾಲೂಕಿನ ಸಂಕದಾಳ ಗ್ರಾಮದ ಪ್ರಗತಿಪರ ರೈತ ಹಾಗೂ ಮಾಜಿ ಗ್ರಾಮ ಪಂಚಾಯಿತಿ ಸದಸ್ಯ ದುರಗಪ್ಪ ಬಸಪ್ಪ ಹರಿಜನ ಅವರ ಕೃಷಿ ಕ್ಷೇತ್ರದ ಸಾಧನೆಯನ್ನು ಪರಿಗಣಿಸಿ ಬಸವ ಕೃಷಿ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಅದೇ ಗ್ರಾಮದ ನೀಲನಗೌಡ ರಾಮನಗೌಡ ಪಾಟೀಲ, ಹಾಲಶಂಕ್ರಪ್ಪ ಮಲ್ಲಪ್ಪ ಸೂರಣಗಿ, ಪಕ್ಕೀರಯ್ಯ ಹಿರೇಮಠ ಹಾಗೂ ಹಾಲನಗೌಡ ಬಸನಗೌಡ ಪಾಟೀಲ ಅವರ ಕೃಷಿ ಸಾಧನೆಯನ್ನು ಗುರುತಿಸಿ ಅವರಿಗೂ ಬಸವ ಕೃಷಿ ರತ್ನ ಪ್ರಶಸ್ತಿ ಪ್ರದಾನ ಮಾಡಿ ಸನ್ಮಾನಿಸಲಾಯಿತು. ಸನ್ಮಾನಿತರಿಗೆ ಅಮ್ಮ ಫೌಂಡೇಶನ್‌ನ ಮಾರ್ಗದರ್ಶಕ ಬಸವರಾಜ ಬಳ್ಳಾರಿ, ಅಧ್ಯಕ್ಷ ಮೈಲಾರಪ್ಪ ಡಿ.ಎಚ್. ವಕೀಲ, ಖಜಾಂಚಿ ಮಾರುತಿ ಜಿ.ಎಚ್., ಕಾರ್ಯದರ್ಶಿ ವಿಶ್ವನಾಥ ದಲಾಲಿ ಹಾಗೂ ಸಂಸ್ಥೆಯ ಪದಾಧಿಕಾರಿಗಳು ಶುಭ ಹಾರೈಸಿದರು.



**ಲಕ್ಷ್ಮೇಶ್ವರ: ತಾಲೂಕಿನ ಗೊಜನೂರ ಗ್ರಾಮದ ಹಾಲು ಉತ್ಪಾದಕರ ಸಂಘದ ಸದಸ್ಯ ಹಾಗೂ ಉಪಾಧ್ಯಕ್ಷರಾಗಿದ್ದ ನಾಗಪ್ಪ ವಡಕಣ್ಣವರ ಅವರ ನಿಧನದ ಹಿನ್ನೆಲೆಯಲ್ಲಿ ಅವರ ಕುಟುಂಬಕ್ಕೆ ಧಾರವಾಡ ಹಾಲು ಒಕ್ಕೂಟ ಕಲ್ಯಾಣ ಸಂಘದ ವತಿಯಿಂದ ₹10 ಸಾವಿರ ನೆರವಿನ ಚೆಕ್ ವಿತರಿಸಲಾಯಿತು. ನಿರ್ದೇಶಕ ಲಿಂಗರಾಜ ಪಾಟೀಲ ಹಾಗೂ ಮುಖ್ಯ ಕಾರ್ಯನಿರ್ವಾಹಕ ನಾಗನಗೌಡ ಪಾಟೀಲ ಚೆಕ್ ವಿತರಿಸಿದರು.**

## ಗದಗ-ಹರಪನಹಳ್ಳಿ ರೈಲು ಮಾರ್ಗಕ್ಕೆ ಆಗ್ರಹಿಸಿ ಜುಲೈ 31ರಿಂದ ಅನಿರ್ದಿಷ್ಟಾವಧಿ ಧರಣಿ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗಹರಪನಹಳ್ಳಿ ರೈಲ್ವೆ ಮಾರ್ಗ ಕಾಮಗಾರಿ ವಿಳಂಬವನ್ನು ಖಂಡಿಸಿ ಜುಲೈ 31ರಂದು ಬೆಳಿಗ್ಗೆ 11 ಗಂಟೆಯಿಂದ ನಗರದ ರೈಲ್ವೆ ನಿಲ್ದಾಣದ ಎದುರು ಜನಕಲ್ಯಾಣ ಯಾತ್ರೆ, ಅಸಹಕಾರ ಚಳವಳಿ ಹಾಗೂ ಅನಿರ್ದಿಷ್ಟಾವಧಿ ಧರಣಿ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ರಾಜ್ಯ ಸಾರ್ವಜನಿಕ ಹೋರಾಟ ವೇದಿಕೆ ಸಂಚಾಲಕ ಬಸವರಾಜ ನವಲಗುಂದ ತಿಳಿಸಿದರು.

ಸೋಮವಾರ ನಗರದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಗದಗಹರಪನಹಳ್ಳಿ ರೈಲು ಮಾರ್ಗ ರಚನೆಯ ಜಂಟಿ ಕ್ರಿಯಾ ಸಮಿತಿ ಹಾಗೂ ಅದ್ವಿಕ್ ವಿವಿಧೋದ್ದೇಶಗಳ ಅಭಿವೃದ್ಧಿ ಸಂಘದ ಸಹಯೋಗದಲ್ಲಿ ಪ್ರತಿಭಟನೆ ನಡೆಯಲಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು.ಗದಗ ಮುಂಡರಗಿ ಹೂವಿನಹಡಗಲಿ ಹರಪನಹಳ್ಳಿ ರೈಲು ಮಾರ್ಗ ಯೋಜನೆ ಮಂಜೂರಾಗಿ 12 ವರ್ಷಗಳು ಕಳೆದರೂ ಕಾಮಗಾರಿ ಆರಂಭವಾಗಿಲ್ಲ. ಯೋಜನೆ ಜಾರಿಗೆ ಆಗ್ರಹಿಸಿ ನವದೆಹಲಿಯ ಜಂತರ್‌ಮಂತರ್ ಸೇರಿದಂತೆ ಗದಗದಲ್ಲಿಯೂ ಹಲವು ಬಾರಿ ಪ್ರತಿಭಟನೆ ನಡೆಸಲಾಗಿದೆ. ಇದರ ಪರಿಣಾಮವಾಗಿ 2015ರಲ್ಲಿ 94 ಕಿಲೋಮೀಟರ್‌ವರೆಗೆ ಸರ್ವೆ ನಡೆಸಲಾಗಿತ್ತು ಎಂದು ಹೇಳಿದರು. ರೈಲ್ವೆ ಮಂಡಳಿಗೆ ಈ ಯೋಜನೆಯಿಂದ ಶೇ.78ರಷ್ಟು ನಷ್ಟವಾಗುತ್ತದೆ ಎಂಬ ಅವೈಜ್ಞಾನಿಕ ವರದಿ ಸಲ್ಲಿಕೆಯಾಗಿದ್ದರಿಂದ ಯೋಜನೆ ಸ್ಥಗಿತಗೊಂಡಿದೆ ಎಂದು ಆರೋಪಿಸಿದ ಅವರು, ನಿರಂತರ ಹೋರಾಟದ ಫಲವಾಗಿ 201617ರ ಕೇಂದ್ರ ಬಜೆಟ್‌ನಲ್ಲಿ ಮರುಸರ್ವೆಗೆ ₹9 ಲಕ್ಷ ಅನುದಾನ ಮಂಜೂರಾದರೂ, ರೈಲ್ವೆ ಮಂಡಳಿ ಇನ್ನೂ ನಿರ್ಲಕ್ಷ್ಯ ಧೋರಣೆ ಮುಂದುವರಿಸಿದೆ ಎಂದು ದೂರಿದರು.

ಪತ್ರಿಕಾಗೋಷ್ಠಿಯಲ್ಲಿ ಗದಗಹರಪನಹಳ್ಳಿ ರೈಲು ಮಾರ್ಗ ರಚನೆಯ ಜಂಟಿ ಕ್ರಿಯಾ ಸಮಿತಿಯ ಮುಂಡರಗಿ ತಾಲೂಕು ಘಟಕದ ಅಧ್ಯಕ್ಷ ಧ್ರುವಕುಮಾರ ಹೂಗಾರ, ವಿಜಯಕುಮಾರ, ಉಪಾಧ್ಯಕ್ಷ ರವಿಗೌಡ ಪಾಟೀಲ, ಸಾರ್ವಜನಿಕ ಹೋರಾಟ ವೇದಿಕೆ ಸದಸ್ಯ ಬಸಪ್ಪ ವಡ್ಡರ ಹಾಗೂ ರಿಯಾಜ್ ಹೊಸಪೇಟೆ ಉಪಸ್ಥಿತರಿದ್ದರು.

## ಶಿರಹಟ್ಟಿ ಪಿಎಸ್‌ಐ ಅಮಾನತಿಗೆ ಆಗ್ರಹಿಸಿ ಮನವಿ

**ವಿಜಯಸಾಕ್ಷಿ ಸುದ್ದಿ, ಗದಗ**

ಶಿರಹಟ್ಟಿ ಪೊಲೀಸ್ ಠಾಣೆಯ ಪಿಎಸ್‌ಐ ಈರಪ್ಪ ರಿತ್ತಿ ಅವರು ವ್ಯಕ್ತಿಯೊಬ್ಬರ ಮೇಲೆ ಹಲ್ಲೆ ನಡೆಸಿರುವ ಆರೋಪದ ಹಿನ್ನೆಲೆಯಲ್ಲಿ ಅವರನ್ನು ಅಮಾನತುಗೊಳಿಸಿ ಸೂಕ್ತ ಇಲಾಖಾ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ದಲಿತ ಮಿತ್ರ ಮಂಡಳಿ ಪದಾಧಿಕಾರಿಗಳು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರಿಗೆ ಮನವಿ ಸಲ್ಲಿಸಿದರು.

ಮನವಿ ಸಲ್ಲಿಸಿದ ಬಳಿಕ ಮಾತನಾಡಿದ ದಲಿತ ಮಿತ್ರ ಮಂಡಳಿಯ ಅಧ್ಯಕ್ಷ ಕುಮಾರ ನಡಗೇರಿ, ಕನಕವಾಡ ಗ್ರಾಮದ ದಾದೇಗೌಡ ಪಾಟೀಲ ಅವರನ್ನು ಜುಲೈ 23ರಂದು ನ್ಯಾಯಾಲಯಕ್ಕೆ ಹಾಜರುಪಡಿಸಲು ಕರೆದೊಯ್ಯುವ ವೇಳೆ ಪಿಎಸ್‌ಐ ಈರಪ್ಪ ರಿತ್ತಿ ಹಾಗೂ ಇತರರು ಮಾರಣಾಂತಿಕವಾಗಿ ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಿದರು.

ಈ ಘಟನೆಯಲ್ಲಿ ದಾದೇಗೌಡ ಪಾಟೀಲ ಅವರ ಎದೆ ಹಾಗೂ ತುಟಿಗೆ ಗಾಯಗಳಾಗಿದ್ದು, ಲಕ್ಷ್ಮೇಶ್ವರ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಎಂಎಲ್‌ಸಿ ದಾಖಲಾಗಿರುವುದಾಗಿ ಅವರು ತಿಳಿಸಿದರು.

ಪಿಎಸ್‌ಐ ಈರಪ್ಪ ರಿತ್ತಿ ವಿರುದ್ಧ ಈ ಹಿಂದೆಯೂ ಸಾರ್ವಜನಿಕರ ಮೇಲೆ ಹಲ್ಲೆ ನಡೆಸಿದ ಆರೋಪಗಳು ಕೇಳಿ ಬಂದಿವೆ ಎಂದು ಆರೋಪಿಸಿದ್ದಾರೆ.

ಇಂತಹ ಆರೋಪಗಳ ಹಿನ್ನೆಲೆಯಲ್ಲಿ ಪಿಎಸ್‌ಐ ಈರಪ್ಪ ರಿತ್ತಿ ಅವರನ್ನು ತಕ್ಷಣ ಅಮಾನತುಗೊಳಿಸಿ ಸಮಗ್ರ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ಈ ಕುರಿತು 10 ದಿನಗಳೊಳಗೆ ಸೂಕ್ತ ಕ್ರಮ ಕೈಗೊಳ್ಳದಿದ್ದರೆ ವಿವಿಧ ಸಂಘಟನೆಗಳ ಸಹಯೋಗದಲ್ಲಿ ಧರಣಿ, ಅಹೋರಾತ್ರಿ ಸತ್ಯಾಗ್ರಹ, ಸರದಿ ಸತ್ಯಾಗ್ರಹ ಹಾಗೂ ಅಮರಣಾಂತಿಕ ಸತ್ಯಾಗ್ರಹ ಸೇರಿದಂತೆ ಉಗ್ರ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದರು.

ಮನವಿ ಸ್ವೀಕರಿಸಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ವಿಷಯವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ಚರ್ಚಿಸಿ ಕಾನೂನುಬದ್ಧವಾಗಿ ಪರಿಶೀಲಿಸುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ದಲಿತ ಮಿತ್ರ ಮಂಡಳಿಯ ಉಪಾಧ್ಯಕ್ಷ ವೆಂಕಟೇಶ ದೊಡ್ಡಮನಿ, ಗೌರವಾಧ್ಯಕ್ಷ ಪಿ.ಎಸ್. ಕಾಳೆ, ಹಿರಿಯ ಮುಖಂಡ ಹುಲಿಗೆಪ್ಪ ವಾಲ್ಮೀಕಿ, ಸದಾನಂದಸಿಂಗ್ ಗುರ್ಲಹೊಸೂರ, ಮಂಜುನಾಥ ಯಮುನಾಳ, ಶಿವು ಬಂಗಾರಿ, ಆನಂದ ಅರಿಕೇರಿ, ಸಂತೋಷ ರಸಾಳಕರ, ಸ್ವರೂಪ ಉಳ್ಳಿಕಾಶಿ, ರಮೇಶ ವಾಲ್ಮೀಕಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.



### ದೇಶಕ್ಕಾಗಿ ಜೀವ ತ್ಯಾಗ ಮಾಡಿದ ಹುತಾತ್ಮರ ಸೇವೆ ಸದಾ ಸ್ಮರಣೀಯ

## ಕಾರ್ಗಿಲ್ ವಿಜಯೋತ್ಸವ: ವೀರ ಯೋಧರಿಗೆ ಗೌರವ ನಮನ



**ವಿಜಯಸಾಕ್ಷಿ ಸುದ್ದಿ, ಗದಗ**

ದೇಶದ ಗಡಿಯಲ್ಲಿ ಮಳೆ, ಗಾಳಿ, ಬಿಸಿಲು, ಚಳಿ ಎನ್ನದೆ ದೇಶದ ಭದ್ರತೆಗಾಗಿ ಹಗಲಿರುಳು ಕರ್ತವ್ಯ ನಿರ್ವಹಿಸುವ ಭಾರತೀಯ ಯೋಧರ ಸೇವೆ ಅವಿಸ್ಮರಣೀಯ ಎಂದು ಗದಗ ಜಿಲ್ಲಾ ರೆಡ್‌ಕ್ರಾಸ್ ಸಂಸ್ಥೆಯ ಸಭಾಪತಿ ಡಾ. ಆರ್. ಎನ್. ಗೋಡಬೋಲೆ ಹೇಳಿದರು.

ನಗರದ ಮಹಾತ್ಮಾ ಗಾಂಧಿ ವೃತ್ತದಲ್ಲಿ ಭಾನುವಾರ ಗದಗ ಜಿಲ್ಲಾ ಮಾಜಿ ಸೈನಿಕರ ಸಂಘ, ಮಾಜಿ ಹಾಗೂ ಹಾಲಿ ಪ್ಯಾರಾಮಿಲಿಟರಿ ಯೋಧರ ಕಲ್ಯಾಣ ಸಂಘ ಹಾಗೂ ವೀರನಾರಿಯರ ಸಂಘದ ಸಂಯುಕ್ತ ಆಶ್ರಯದಲ್ಲಿ ನಡೆದ 27ನೇ ಕಾರ್ಗಿಲ್ ವಿಜಯೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಭಾರತೀಯ ಸೈನಿಕರು ದೇಶದ ಹೆಮ್ಮೆ. ಅವರ ತ್ಯಾಗ, ಸಾಹಸ ಮತ್ತು ದೇಶಭಕ್ತಿಗೆ ಪ್ರತಿಯೊಬ್ಬ ನಾಗರಿಕರೂ ಗೌರವ ಸಲ್ಲಿಸಬೇಕು. ಕಾರ್ಗಿಲ್ ಯುದ್ಧದಲ್ಲಿ ವೀರಮರಣ ಹೊಂದಿದ ಯೋಧರ ತ್ಯಾಗವನ್ನು ಎಂದಿಗೂ ಮರೆಯಬಾರದು ಎಂದು ಅವರು ಹೇಳಿದರು.

ಹಾಲಿ ಹಾಗೂ ಮಾಜಿ ಪ್ಯಾರಾಮಿಲಿಟರಿ ಯೋಧರ ಸಂಘದ ಅಧ್ಯಕ್ಷ ನಾಗರಾಜ ಕುಂದರಗಿ ಮಾತನಾಡಿ, ಸೈನಿಕರು ತಮ್ಮ ಪ್ರಾಣವನ್ನೇ ಪಣಕ್ಕಿಟ್ಟು ದೇಶದ ಗಡಿಯನ್ನು ಕಾಪಾಡುತ್ತಿದ್ದಾರೆ. ಕಾರ್ಗಿಲ್ ವಿಜಯೋತ್ಸವ ಹಾಗೂ ದೇಶಕ್ಕಾಗಿ ಪ್ರಾಣಾರ್ಪಣೆ ಮಾಡಿದ ಹುತಾತ್ಮ ಯೋಧರಿಗೆ ಸರ್ಕಾರ ಹಾಗೂ ಜಿಲ್ಲಾಡಳಿತದಿಂದಲೂ ಅಧಿಕೃತವಾಗಿ ಗೌರವ ಸಲ್ಲಿಸುವ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದು ಒತ್ತಾಯಿಸಿದರು.

ಗದಗ ಜಿಲ್ಲಾ ಮಾಜಿ ಸೈನಿಕರ ಸಂಘದ ಅಧ್ಯಕ್ಷ ಗೂಳಯ್ಯ ಮಾಲಗಿತ್ತಿಮಠ, ಉಪಾಧ್ಯಕ್ಷ ಎಸ್.ಆರ್. ಪಾಟೀಲ ಹಾಗೂ ಎಸ್.ಎಸ್. ಪೆಂಟಾ ಕಾರ್ಗಿಲ್ ಯುದ್ಧದ ಘಟನೆಗಳು ಮತ್ತು ಭಾರತೀಯ ಸೇನೆಯ ಶೌರ್ಯವನ್ನು ಸ್ಮರಿಸಿದರು. ಕಾರ್ಯಕ್ರಮದ ಆರಂಭದಲ್ಲಿ ಮಹಾತ್ಮಾ ಗಾಂಧಿ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ಕಾರ್ಗಿಲ್ ಯುದ್ಧದಲ್ಲಿ ಹುತಾತ್ಮರಾದ ಯೋಧರ ಗೌರವಾರ್ಥ ಮೌನಾಚರಣೆ ನಡೆಸಲಾಯಿತು. ಕಾರ್ಯಕ್ರಮದಲ್ಲಿ ಮಾಜಿ ಸೈನಿಕರಾದ ಬಿ.ವಿ. ಅಬ್ಬಿಗೇರಿ, ಎ.ಎಂ. ತಹಶೀಲ್ದಾರ, ವಿ.ಬಿ. ಬಿಂಗಿ, ವಿಜಯ ಬಡಿಗೇರ, ಜಿ.ಬಿ. ಅರವಟಗಿಮಠ, ಮಹಮ್ಮದ್ ಹನೀಫ್, ಎಸ್.ಎಫ್. ಹೊನ್ನಪ್ಪನವರ, ಮಲ್ಲಿಕಾರ್ಜುನ,

**ಮಳೆ, ಗಾಳಿ, ಬಿಸಿಲು, ಚಳಿ ಎನ್ನದೆ ದೇಶದ ಗಡಿಯಲ್ಲಿ ಕರ್ತವ್ಯ ನಿರ್ವಹಿಸುವ ಭಾರತೀಯ ಯೋಧರ ಸೇವೆ ಸದಾ ಸ್ಮರಣೀಯ. ಅವರ ತ್ಯಾಗಕ್ಕೆ ಪ್ರತಿಯೊಬ್ಬರೂ ಗೌರವ ಸಲ್ಲಿಸಬೇಕು.**

**- ಡಾ. ಆರ್.ಎನ್. ಗೋಡಬೋಲೆ, ಸಭಾಪತಿ, ಗದಗ ಜಿಲ್ಲಾ ರೆಡ್‌ಕ್ರಾಸ್ ಸಂಸ್ಥೆ**

ಮಹೇಶ ಆಶಿ, ಕೆ.ಎಸ್. ಹಿರೇಮಠ, ಎಸ್.ಬಿ. ಸರ್ವಿ, ಎಸ್.ಎಸ್. ವಡ್ಡಿನ, ಮಂಗಲೇಶ ವಸ್ತ್ರದ, ಎಫ್.ಎನ್. ಪಾಟೀಲ, ಹಾಲಿ ಹಾಗೂ ಮಾಜಿ ಪ್ಯಾರಾಮಿಲಿಟರಿ ಯೋಧರ ಸಂಘದ ಬಸಯ್ಯ ಹಿರೇಮಠ, ಈಶ್ವರಪ್ಪ ಕರ್ಕಿಕಟ್ಟಿ, ಪ್ರಭಣ್ಣ ಮಾಕಾಪೂರ, ಮುತ್ತಣ್ಣ, ಬಸಪ್ಪ ಸಂದಿಮನಿ, ಮಲ್ಲಯ್ಯ ಕರವೀರಮಠ, ಶಂಭುಲಿಂಗಯ್ಯ ಹಾದಿಮನಿ, ಅಶೋಕ ಷಡಕ್ಷರಿ, ಅಂದಪ್ಪ ಅಬ್ಬಿಗೇರಿ, ಮಲ್ಲಿಕಾರ್ಜುನ ಮೇವುಂಡಿ, ವೀರನಾರಿಯರಾದ ಶಿವಲೀಲಾ ಬಾವಿಕಟ್ಟಿ, ಮೀನಾಕ್ಷಿ ಬಡಿ, ರೇಣುಕಾ ಮರಡಿ, ಗೀತಾ ಪೂಜಾರ, ಶಿವಲೀಲಾ ಚಿಗರಿ, ಇಂದಿರಾ ಹೆಬಸೂರ ಸೇರಿದಂತೆ ಪೊಲೀಸರು, ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.

## ವಿಬಿಜಿ ರಾಮ್‌ಜಿ ಯೋಜನೆಗೆ ಶಾಸಕ ಡಾ. ಚಂದ್ರು ಲಮಾಣಿ ಚಾಲನೆ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಶಿಗ್ಲಿ ಗ್ರಾಮದಲ್ಲಿ ಕೇಂದ್ರ ಸರ್ಕಾರದ ವಿಬಿಜಿ ರಾಮ್‌ಜೀ ಯೋಜನೆಗೆ ಶಾಸಕ ಡಾ. ಚಂದ್ರು ಲಮಾಣಿ ಸೋಮವಾರ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.

ಬಳಿಕ ಯೋಜನೆಯಡಿ ಸಿಸಿ ರಸ್ತೆ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ವಿಬಿಜಿ ರಾಮ್‌ಜೀ ಯೋಜನೆಯು ಗ್ರಾಮೀಣ ಭಾಗದ ಜನರಿಗೆ ಹೆಚ್ಚಿನ ಉದ್ಯೋಗಾವಕಾಶ ಕಲ್ಪಿಸುವ ಮಹತ್ವದ ಯೋಜನೆಯಾಗಿದೆ. ತಾಲೂಕು ಪಂಚಾಯಿತಿಯ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಸಮನ್ವಯದಿಂದ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ ಸ್ಥಳೀಯರಿಗೆ ಉದ್ಯೋಗ ದೊರೆಯುವಂತೆ ನೋಡಿಕೊಳ್ಳಬೇಕು ಎಂದು ಸೂಚಿಸಿದರು.

ಯೋಜನೆಯಡಿ ಸದ್ಯ ರಸ್ತೆ ಕಾಮಗಾರಿಗಳಿಗೆ ಅವಕಾಶವಿರುವುದರಿಂದ ಶಿಗ್ಲಿ ಗ್ರಾಮದಲ್ಲಿ ಅಗತ್ಯವಿರುವ ಕಡೆಗಳಲ್ಲಿ ಸಿಸಿ ರಸ್ತೆ ನಿರ್ಮಾಣಕ್ಕೆ ಆದ್ಯತೆ ನೀಡಲಾಗುತ್ತಿದೆ. ಜೊತೆಗೆ ದೊಡ್ಡೂರುಶಿಗ್ಲಿ ರಸ್ತೆ ಹಾಗೂ ಲಿಂಗರಾಜ ಸರ್ಕಲ್‌ನಿಂದ ಹಳೆ ಬಸ್ ನಿಲ್ದಾಣದವರೆಗೆ ರಸ್ತೆ ನಿರ್ಮಾಣಕ್ಕೆ ಅನುದಾನ ಬಿಡುಗಡೆಯಾಗಿದ್ದು, ಶೀಘ್ರದಲ್ಲೇ ಕಾಮಗಾರಿ ಆರಂಭಿಸಲಾಗುವುದು ಎಂದು ತಿಳಿಸಿದರು.


ಅಭಿವೃದ್ಧಿ ಕಾಮಗಾರಿಗಳಿಗೆ ಸಾರ್ವಜನಿಕರು ಸಹಕಾರ ನೀಡಬೇಕು. ಗುಣಮಟ್ಟದ ಕಾಮಗಾರಿ ನಡೆಸಲು ಎಲ್ಲರೂ ಕೈಜೋಡಿಸಬೇಕು ಎಂದು ಅವರು ಮನವಿ ಮಾಡಿದರು.

ಈ ಸಂದರ್ಭದಲ್ಲಿ ನಿವೃತ್ತ ಪೊಲೀಸ್ ಅಧಿಕಾರಿ ಶಂಕರ ರಾಗಿ, ಬಸಣ್ಣ ಕಳಸದ, ಹನಮಂತಪ್ಪ ತಳವಾರ, ಡಿ.ವೈ. ಹುನಗುಂದ, ರಾಮಣ್ಣ ಲಮಾಣಿ, ಯಲ್ಲಪ್ಪ ತಳವಾರ, ಅಶೋಕ ತೋಟದ, ಅಶೋಕಯ್ಯ ಮುಳಗುಂದಮಠ, ಈರಣ್ಣ ಅಕ್ಕೂರ, ಆನಂದ ತೆವರಿ, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮಂಜುಳ ಹಕಾರಿ, ಗ್ರಾಮೀಣ ಉದ್ಯೋಗ ಸಹಾಯಕ ನಿರ್ದೇಶಕ ಕೃಷ್ಣಪ್ಪ ಧರ್ಮರ, ವೀರಣ್ಣ ಅಳ್ಳಳ್ಳಿ, ಪಿಡಿಒ ರವಿ ಕೊರಕನವರ, ಡಿಐಇಸಿ ಎಚ್.ಎಂ. ಮಂಜುನಾಥಸ್ವಾಮಿ, ಶಂಭು ಹುನಗುಂದ, ಸಂಜೀವ ದೇಸಾಯಿ, ಮಂಜುನಾಥ ಸೂರಣಗಿ, ಸಂತೋಷ ತಾಂದಳೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.



ಮಳೆಗಾಲದಲ್ಲಿ ಪ್ರಕೃತಿಯ ರಮಣೀಯ ರೂಪ ಅನಾವರಣ | ದೇಶ-ವಿದೇಶದ ಪ್ರವಾಸಿಗರ ನೆಚ್ಚಿನ ತಾಣ

# ಎಪ್ಪತ್ತುಗಿರಿ ಬೇಡ... ಒಮ್ಮೆ ಕಪ್ಪತ್ತಗುಡ್ಡ ನೋಡಿ!



**ವಿಜಯಸಾಕ್ಷಿ ಸುದ್ದಿ, ಡಂಬಳ**

ಉತ್ತರ ಕರ್ನಾಟಕದ ಸಹ್ಯಾದ್ರಿ ಎಂದೇ ಖ್ಯಾತಿ ಪಡೆದಿರುವ ಕಪ್ಪತ್ತಗುಡ್ಡ ಮಳೆಗಾಲದ ಹಸಿರು ಹೊದಿಕೆ ಹೊದ್ದು ಪ್ರಕೃತಿ ಪ್ರೇಮಿಗಳು, ಚಾರಣಿಗರು ಹಾಗೂ ಯಾತ್ರಾರ್ಥಿಗಳನ್ನು ತನ್ನತ್ತ ಸೆಳೆಯುತ್ತಿದೆ. ಹದವಾದ ಮಳೆಯ ಸಿಂಚನದಿಂದ ಗುಡ್ಡದ ತುಂಬ ನಾನಾ ಬಗೆಯ ಕಾಡುಹೂಗಳು ಅರಳಿ, ಔಷಧೀಯ ಸಸ್ಯಗಳ ಪರಿಮಳದಿಂದ ಪರಿಸರ ಸುಗಂಧಮಯವಾಗಿದೆ. ಎಪ್ಪತ್ತುಗಿರಿ ನೋಡುವುದಕ್ಕಿಂತ ಕಪ್ಪತ್ತಗಿರಿ ನೋಡುವುದೇ ಮೇಲು ಎಂಬ ಜನಪದ ನುಡಿ ಕಪ್ಪತ್ತಗುಡ್ಡದ ವೈಭವವನ್ನು ಸಾರುತ್ತದೆ. ಔಷಧೀಯ ಸಸ್ಯಗಳ ಆಗರ, ಜೀವವೈವಿಧ್ಯದ ನೆಲೆ, ಪರಿಸರ ಅಧ್ಯಯನದ ಪ್ರಯೋಗಾಲಯ, ಜನಪದ ಕಥೆಗಳ ತೊಟ್ಟಿಲು ಹಾಗೂ ಏಷ್ಯಾದಲ್ಲಿಯೇ ಅತಿ ಹೆಚ್ಚು ಗಾಳಿ ಬೀಸುವ ಪ್ರದೇಶ ಎಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ಕಪ್ಪತ್ತಗುಡ್ಡ ಇಂದು ಉತ್ತರ ಕರ್ನಾಟಕದ ಪ್ರಮುಖ ಪರಿಸರ ಪ್ರವಾಸಿ ತಾಣವಾಗಿ ಗುರುತಿಸಿಕೊಂಡಿದೆ. ಸುಮಾರು 33 ಸಾವಿರ ಹೆಕ್ಟೇರ್ ವ್ಯಾಪ್ತಿಯಲ್ಲಿ ಶಿರಹಟ್ಟಿ, ಮುಂಡರಗಿ ಹಾಗೂ ಗದಗ ತಾಲ್ಲೂಕುಗಳಲ್ಲಿ ಹರಡಿರುವ ಈ ಗಿರಿಶ್ರೇಣಿ ಬಿಂಕದಕಟ್ಟಿಯಿಂದ ಸಿಂಗಟಾಲೂರಿನವರೆಗೆ ಸುಮಾರು 64 ಕಿಲೋಮೀಟರ್ ವಿಸ್ತಾರ ಹೊಂದಿದೆ. ಬೇಸಿಗೆಯಲ್ಲಿ ಬೋಳುಗುಡ್ಡದಂತೆ ಕಾಣುವ ಈ ಪ್ರದೇಶ ಮಳೆಗಾಲದಲ್ಲಿ ಹಸಿರು ಉಡುಗೆಯುಟ್ಟು ಪ್ರಕೃತಿಯ ಮನಮೋಹಕ ಸೌಂದರ್ಯವನ್ನು ಅನಾವರಣಗೊಳಿಸುತ್ತದೆ.

## ಅರಣ್ಯ ಇಲಾಖೆಯ ಪರಿಸರ ಕಾಳಜಿ

ಕಪ್ಪತ್ತಗುಡ್ಡಕ್ಕೆ ಆಗಮಿಸುವ ಪ್ರವಾಸಿಗರಲ್ಲಿ ಪರಿಸರ ಜಾಗೃತಿ ಮೂಡಿಸಲು ಅರಣ್ಯ ಇಲಾಖೆ ಹಲವು ವಿನೂತನ ಕಾರ್ಯಕ್ರಮಗಳನ್ನು ಜಾರಿಗೊಳಿಸಿದೆ. ಮಳೆಗಾಲದಲ್ಲಿ ಭೇಟಿ ನೀಡುವ ಪ್ರವಾಸಿಗರಿಗೆ 10 ಸಾವಿರಕ್ಕೂ ಹೆಚ್ಚು ವಿವಿಧ ಜಾತಿಯ ಬೀಜದುಂಡೆಗಳನ್ನು ಉಚಿತವಾಗಿ ವಿತರಿಸಲಾಗುತ್ತಿದ್ದು, ಗಿಡ ನೆಡುವ ಅಭಿಯಾನಕ್ಕೆ ಉತ್ತೇಜನ ನೀಡಲಾಗುತ್ತಿದೆ. ಇದರ ಜೊತೆಗೆ ಪ್ಲಾಸ್ಟಿಕ್ ಮುಕ್ತ ಕಪ್ಪತ್ತಗುಡ್ಡ ನಿರ್ಮಾಣದ ಉದ್ದೇಶದಿಂದ ಪ್ರವಾಸಿಗರು ತರುವ ಪ್ಲಾಸ್ಟಿಕ್ ಬಾಟಲಿಗಳಿಗೆ ಸ್ಟಿಕ್ಕರ್ ಅಳವಡಿಸಿ, ಹಿಂದಿರುಗುವಾಗ ಅವುಗಳನ್ನು ಮರಳಿ ತರಿಸುವ ವ್ಯವಸ್ಥೆ ಮಾಡಲಾಗಿದೆ. ಈ ಯೋಜನೆಯಿಂದ ಪ್ಲಾಸ್ಟಿಕ್ ತ್ಯಾಜ್ಯ ನಿಯಂತ್ರಣದಲ್ಲಿ ಗಮನಾರ್ಹ ಯಶಸ್ಸು ದೊರೆತಿದೆ. ಕಪ್ಪತ್ತಗುಡ್ಡವನ್ನು ಇನ್ನಷ್ಟು ಹಸಿರುಗೊಳಿಸುವ ಹಾಗೂ ಪರಿಸರ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಇಲಾಖೆ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಕಪ್ಪತ್ತಗುಡ್ಡ ವಲಯ ಅರಣ್ಯಾಧಿಕಾರಿ ಮಂಜುನಾಥ ಮೇಗಲಮನಿ ತಿಳಿಸಿದ್ದಾರೆ.

## ಹೋರಾಟದಿಂದ ಉಳಿದ ಹಸಿರು ಸಂಪತ್ತು

ಹೆಮಟೈಟ್, ಲಿಮೋನೈಟ್, ತಾಮ್ರ, ಮ್ಯಾಂಗನೀಸ್ ಹಾಗೂ ಚಿನ್ನ ಸೇರಿದಂತೆ ಹಲವು ಖನಿಜ ಸಂಪತ್ತು ಹೊಂದಿರುವ ಕಪ್ಪತ್ತಗುಡ್ಡದಲ್ಲಿ ಹಿಂದೆ ಗಣಿಗಾರಿಕೆ ನಡೆಸಲು ಯತ್ನಿಸಲಾಗಿತ್ತು. ಆದರೆ ವಿವಿಧ ಮಠಾಧೀಶರು, ಪರಿಸರ ಹೋರಾಟಗಾರರು, ಚಿಂತಕರು ಹಾಗೂ ನಾಗರಿಕರ ಹೋರಾಟದಿಂದ ಈ ಹಸಿರು ಪ್ರದೇಶ ಉಳಿದುಕೊಂಡಿದೆ. ಲಿಂ. ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮೀಜಿ ಸೇರಿದಂತೆ ಅನೇಕ ಪರಿಸರ ಪ್ರೇಮಿಗಳು ಕಪ್ಪತ್ತಗುಡ್ಡದ ಮಹತ್ವದ ಬಗ್ಗೆ ಜಾಗೃತಿ ಮೂಡಿಸಿದ ಪರಿಣಾಮ, ಇಂದು ಇದು ಉತ್ತರ ಕರ್ನಾಟಕದ ಪರಿಸರ ಸಮತೋಲನ ಕಾಪಾಡುವ ಪ್ರಮುಖ ಹಸಿರು ಸಂಪತ್ತಾಗಿ ಉಳಿದಿದೆ. ಮಳೆಗಾಲದಲ್ಲಿ ಕಪ್ಪತ್ತಗುಡ್ಡದ ಸೌಂದರ್ಯ ಮತ್ತಷ್ಟು ಹೆಚ್ಚಾಗಿದ್ದು, ಶುದ್ಧ ಗಾಳಿ, ಹಸಿರು ಪರಿಸರ, ಔಷಧೀಯ ಸಸ್ಯ ಸಂಪತ್ತು ಹಾಗೂ ಚಾರಣದ ಅನುಭವ ಬಯಸುವವರಿಗೆ ಇದು ಅತ್ಯುತ್ತಮ ಪ್ರವಾಸಿ ತಾಣವಾಗಿದೆ.


ಮಳೆಗಾಲದ ಹಸಿರು ಹೊದಿಕೆಯಲ್ಲಿ ಕಂಗೊಳಿಸುತ್ತಿರುವ ಕಪ್ಪತ್ತಗುಡ್ಡ ಕೇವಲ ಪ್ರವಾಸಿ ತಾಣವಲ್ಲ, ಪರಿಸರ ಸಂರಕ್ಷಣೆಯ ಮಹತ್ವ ಸಾರುವ ಜೀವಂತ ಪಾಠಶಾಲೆಯಾಗಿದೆ. ಪ್ರವಾಸಿಗರು ಪ್ಲಾಸ್ಟಿಕ್ ತ್ಯಾಜ್ಯ ಎಸೆಯದೆ ಪರಿಸರ ಸಂರಕ್ಷಣೆಗೆ ಸಹಕರಿಸಬೇಕು.

– **ಮಂಜುನಾಥ ಮೇಗಲಮನಿ,** ವಲಯ ಅರಣ್ಯಾಧಿಕಾರಿ, ಕಪ್ಪತ್ತಗುಡ್ಡ

## ಗಾಳಿಗುಂಡಿ ಬಸವಣ್ಣ ಪವನಚಕ್ರಗಳ ಆಕರ್ಷಣೆ

ಕಪ್ಪತಮಲ್ಲೇಶ್ವರ ದೇವಸ್ಥಾನದಿಂದ ಮುಂದೆ ಚಾರಣ ಮಾಡಿದರೆ ಸಿಗುವ ಗಾಳಿಗುಂಡಿ ಬಸವಣ್ಣ ದೇವಾಲಯ ಪ್ರವಾಸಿಗರಿಗೆ ವಿಶಿಷ್ಟ ಅನುಭವ ನೀಡುತ್ತದೆ. ಗುಡ್ಡದ ತುದಿಯಲ್ಲಿ ಅಳವಡಿಸಿರುವ ಬೃಹತ್ ಪವನಚಕ್ರಗಳು, ನಿರಂತರ ಬೀಸುವ ತಂಗಾಳಿ ಹಾಗೂ ಅಲ್ಲಿಂದ ಕಾಣುವ ವಿಹಂಗಮ ದೃಶ್ಯಗಳು ಪ್ರವಾಸಿಗರನ್ನು ಮನಸೂರೆಗೊಳಿಸುತ್ತವೆ.





## ಜೀವವೈವಿಧ್ಯದ ಅಪರೂಪದ ತಾಣ

ಕಪ್ಪತ್ತಗುಡ್ಡ ಔಷಧೀಯ ಸಸ್ಯಗಳ ಆಗರವಾಗಿದ್ದು, ಆಯುರ್ವೇದ ವಿದ್ಯಾರ್ಥಿಗಳು ಹಾಗೂ ಸಂಶೋಧಕರ ಅಧ್ಯಯನ ಕೇಂದ್ರವಾಗಿದೆ. ಚಿರತೆ, ಕರಡಿ, ತೋಳ, ನರಿ, ಪುನುಗು ಬೆಕ್ಕು, ಚುಕ್ಕೆ ಜಿಂಕೆ, ಸಾರಂಗ, ಮುಳ್ಳುಹಂದಿ ಸೇರಿದಂತೆ ಹಲವು ವನ್ಯಜೀವಿಗಳು ಇಲ್ಲಿ ಆಶ್ರಯ ಪಡೆದಿವೆ. ನವಿಲು, ಬುಲ್‌ಬುಲ್, ಸನ್‌ಬರ್ಡ್, ಮಿಂಚುಳ್ಳಿ, ಬ್ಲ್ಯಾಕ್ ಡ್ರಾಂಗೋ ಸೇರಿದಂತೆ ವೈವಿಧ್ಯಮಯ ಪಕ್ಷಿಗಳು ಪಕ್ಷಿ ವೀಕ್ಷಕರು ಹಾಗೂ ಛಾಯಾಗ್ರಾಹಕರನ್ನು ಸೆಳೆಯುತ್ತಿವೆ. ಬೆಟ್ಟದ ತಪ್ಪಲಿನಲ್ಲಿರುವ ಅರಣ್ಯ ಇಲಾಖೆಯ ಶ್ರೀ ಕಪ್ಪತಮಲ್ಲೇಶ್ವರ ದೈವೀವನದಲ್ಲಿ ನೂರಾರು ಔಷಧೀಯ ಸಸ್ಯಗಳನ್ನು ಬೆಳೆಸಲಾಗಿದ್ದು, ಪ್ರತಿಯೊಂದು ಸಸ್ಯಕ್ಕೂ ಮಾಹಿತಿ ಫಲಕ ಅಳವಡಿಸಲಾಗಿದೆ. ಪ್ರವಾಸಿಗರಿಗೆ ಉಚಿತ ಪ್ರವೇಶವಿದ್ದು, ಪರಿಸರ ಶಿಕ್ಷಣದ ಕೇಂದ್ರವಾಗಿ ಇದು ರೂಪುಗೊಂಡಿದೆ.

# ಕಾರ್ಗಿಲ್ ವೀರರ ತ್ಯಾಗ ಸ್ಮರಿಸುವುದು ಪ್ರತಿಯೊಬ್ಬರ ಕರ್ತವ್ಯ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಗಡಿಯಲ್ಲಿ ಹಗಲಿರುಳು ದೇಶವನ್ನು ಕಾಪಾಡುತ್ತಿರುವ ಸೈನಿಕರ ತ್ಯಾಗದಿಂದಲೇ ನಾವು ನೆಮ್ಮದಿಯ ಜೀವನ ನಡೆಸುತ್ತಿದ್ದೇವೆ. 1999ರ ಕಾರ್ಗಿಲ್ ಯುದ್ಧದಲ್ಲಿ ದೇಶಕ್ಕಾಗಿ ಪ್ರಾಣಾರ್ಪಣೆ ಮಾಡಿದ ವೀರಯೋಧರಿಗೆ ಗೌರವ ಸಲ್ಲಿಸುವುದು ಪ್ರತಿಯೊಬ್ಬ ಭಾರತೀಯನ ಕರ್ತವ್ಯ ಎಂದು ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಹೇಳಿದರು. ನರೇಗಲ್ಲದ ನಿವೃತ್ತ ಸೈನಿಕರ ಸಂಘ ವತಿಯಿಂದ ಆಯೋಜಿಸಿದ್ದ ಕಾರ್ಗಿಲ್ ವಿಜಯ ದಿವಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಮಕ್ಕಳಲ್ಲಿ ದೇಶಭಕ್ತಿ ಹಾಗೂ ರಾಷ್ಟ್ರೀಯ ಚಿಂತನೆ ಬೆಳೆಸುವ ಅಗತ್ಯವಿದೆ. ರಾಷ್ಟ್ರೀಯ ಕಾರ್ಯಕ್ರಮಗಳಲ್ಲಿ ಯಾರ ಆಹ್ವಾನಕ್ಕೂ ಕಾಯದೆ ಸ್ವಯಂಪ್ರೇರಿತವಾಗಿ ಭಾಗವಹಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಸಮಾಜಮುಖಿ ಕಾರ್ಯಗಳ ಮೂಲಕ ನರೇಗಲ್ಲದ ನಿವೃತ್ತ ಸೈನಿಕರ ಸಂಘ ಉತ್ತಮ ಮಾದರಿಯಾಗಿದೆ ಎಂದು ಹೇಳಿದರು.

ಮುತ್ತಣ್ಣ ಪಲ್ಲೇದ ಮಾತನಾಡಿ, ನಿವೃತ್ತ ಸೈನಿಕರು ತಮ್ಮ ಹೋರಾಟದ ಮನೋಭಾವನೆಯನ್ನು ಇಂದಿಗೂ ಉಳಿಸಿಕೊಂಡಿರುವುದು ಶ್ಲಾಘನೀಯ. ದೇಶಕ್ಕಾಗಿ ಪ್ರಾಣತ್ಯಾಗ ಮಾಡಿದ ಯೋಧರನ್ನು ಸದಾ ಸ್ಮರಿಸುವುದು ಪ್ರತಿಯೊಬ್ಬರ ಹೊಣೆಗಾರಿಕೆ ಎಂದರು.ಡಾ. ಕೆ.ಬಿ. ಧನ್ನೂರ ಮಾತನಾಡಿ, ಸೈನಿಕರೇ ನಿಜವಾದ ದೇಶಭಕ್ತರು ಮತ್ತು ನಿಷ್ಕಾಮ ಕರ್ಮಯೋಗಿಗಳು. ಶಾಲೆ-ಕಾಲೇಜುಗಳಲ್ಲಿ ಎನ್‌ಸಿಸಿ ಕಡ್ಡಾಯಗೊಳಿಸಿದರೆ ಉತ್ತಮ ಸೈನಿಕರನ್ನು ರೂಪಿಸಲು ನೆರವಾಗಲಿದೆ. ವಿದ್ಯಾರ್ಥಿಗಳಲ್ಲಿ ರಾಷ್ಟ್ರೀಯ ಮನೋಭಾವ ಬೆಳೆಸುವ ಕಾರ್ಯವನ್ನು ನಿವೃತ್ತ ಸೈನಿಕರ ಸಂಘ ಕೈಗೊಳ್ಳಬೇಕು ಎಂದು ಸಲಹೆ ನೀಡಿದರು.ಬಸವರಾಜ ವಂಕಲಕುಂಟಿ ಮಾತನಾಡಿ, ಭಾರತೀಯ ಯೋಧರು ಸಮರ್ಥ ಯುದ್ಧತಂತ್ರದಿಂದ ಕಾರ್ಗಿಲ್ ಯುದ್ಧದಲ್ಲಿ ವಿಜಯ ಸಾಧಿಸಿದರು. ದೇಶದೊಳಗಿನ ಹಿತಶತ್ರುಗಳ ವಿರುದ್ಧವೂ ಜಾಗೃತ ಮನೋಭಾವ ಅಗತ್ಯವಾಗಿದೆ. ಗಾಂಧಿ ಭವನವನ್ನು ಜೀರ್ಣೋದ್ಧಾರ ಮಾಡಿ ಸಾಂಸ್ಕೃತಿಕ ಚಟುವಟಿಕೆಗಳಿಗೆ ಅನುಕೂಲ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ಅಶೋಕ ಬೇವಿನಕಟ್ಟಿ ಮಾತನಾಡಿ, ದೇಶಕ್ಕೆ ಸಂಕಷ್ಟ ಬಂದಾಗ ಸೂಕ್ತ ನಿರ್ಧಾರಗಳನ್ನು ಕೈಗೊಂಡು ದೇಶರಕ್ಷಣೆಗೆ ಮುಂದಾದ ನಾಯಕರನ್ನು ಸ್ಮರಿಸಬೇಕು. ನಿವೃತ್ತ ಸೈನಿಕರು ಇಂದಿಗೂ ಸಮಾಜಮುಖಿ ಕಾರ್ಯಗಳಲ್ಲಿ ಸಕ್ರಿಯರಾಗಿರುವುದು ಹೆಮ್ಮೆಯ ಸಂಗತಿ ಎಂದರು.ಸುರೇಶ ಹಳ್ಳಿಕೇರಿ ಕಾರ್ಗಿಲ್ ಯುದ್ಧದ ಹಿನ್ನೆಲೆ ಮತ್ತು ಪರಿಣಾಮಗಳ ಕುರಿತು ವಿವರಿಸಿದರು.

ಶಿವಪುತ್ರಪ್ಪ ಸಂಗನಾಳ ಪ್ರಾಸ್ತಾವಿಕವಾಗಿ ಮಾತನಾಡಿದರು. ಆರಂಭದಲ್ಲಿ ಶಾಂತಗೌಡ ಮತ್ತು ಕುಮಾರ ದೇಶಭಕ್ತಿ ಗೀತೆಗಳನ್ನು ಪ್ರಸ್ತುತಪಡಿಸಿದರು. ದಾದಾಸಾಬ ನದಾಫ್ ನಿರೂಪಿಸಿದರು. ಮಲ್ಲನಗೌಡ ಮಲ್ಲನಗೌಡ್ರ ಸ್ವಾಗತಿಸಿದರು. ಪ್ರಭುದೇವ ಮುಕ್ಕಣ್ಣವರ ವಂದಿಸಿದರು. ಕಾರ್ಯಕ್ರಮದಲ್ಲಿ ನಿವೃತ್ತ ಸೈನಿಕರು ಭಾಗವಹಿಸಿ ಕಾರ್ಗಿಲ್ ವೀರಯೋಧರಿಗೆ ನಮನ ಸಲ್ಲಿಸಿದರು.

**ಗಡಿಯಲ್ಲಿ ನಿಂತು ದೇಶವನ್ನು ಕಾಯುವ ಸೈನಿಕರ ತ್ಯಾಗದಿಂದಲೇ ನಾವು ನೆಮ್ಮದಿಯಿಂದ ಬದುಕುತ್ತಿದ್ದೇವೆ. ಕಾರ್ಗಿಲ್ ವೀರರ ತ್ಯಾಗವನ್ನು ಸದಾ ಸ್ಮರಿಸುವುದು ಪ್ರತಿಯೊಬ್ಬ ಭಾರತೀಯನ ಕರ್ತವ್ಯ.**

– **ಅರುಣ ಕುಲಕರ್ಣಿ,** ನಿವೃತ್ತ ಮುಖ್ಯ ಶಿಕ್ಷಕ

# ರಾಗ, ತಾಳ, ಲಯದಂತೆ ಮನಸ್ಸು...


ಸಂಗೀತಕ್ಕೆ ಮನಸ್ಸೋಲದವರೇ ಇಲ್ಲ. ಮನುಷ್ಯನ ಭಾವಗಳನ್ನು ಬೆಸೆಯುವ ಮಾಂತ್ರಿಕ ಶಕ್ತಿಯೇ ಸಂಗೀತ. ರಾಗ, ತಾಳ, ಲಯ ಸಂಗೀತದ ಆಧಾರಸ್ತಂಭಗಳು. ಸ್ವರಗಳ ಶಿಸ್ತುಬದ್ಧತೆಯೇ ರಾಗವಾದರೆ, ಸಂಗೀತಕ್ಕೆ ಹೃದಯ ಬಡಿತದಂತೆ ತಾಳ. ಇನ್ನು ಲಯವೆಂದರೆ ಭಾವಾನುಸಂಧಾನದ ಬೆಸುಗೆಯಂತೆ. ಭಾವನೆಗಳ ವೇಗವನ್ನು ಸರಿದೂಗಿಸುವ ಲಯ ಸಂಗೀತದ ಸ್ವಾರಸ್ಯಕ್ಕೆ ಮೆರಗು ನೀಡುತ್ತದೆ.

ಮನಸ್ಸೂ ಸಹ ಒಂದು ರೀತಿಯಲ್ಲಿ ಸಂಗೀತದ ರಾಗ, ತಾಳ, ಲಯದಂತೆಯೇ. ಮನವೇ ಮನುಷ್ಯನ ಮಹಾನ್ ಮಿತ್ರ. ಕೆಲವು ಸಂದರ್ಭಗಳಲ್ಲಿ ಅದೇ ಮನಸ್ಸು ಅವನ ದೊಡ್ಡ ಶತ್ರುವೂ ಆಗಬಹುದು. ರಾಗ, ತಾಳ, ಲಯ ತಪ್ಪಿದರೆ ಸಂಗೀತ ಹೇಗೆ ತನ್ನ ಇಂಪನ್ನು ಕಳೆದುಕೊಳ್ಳುತ್ತದೆಯೋ, ಹಾಗೆಯೇ ಮನಸ್ಸು ತನ್ನದೇ ಆದ ಇತಿಮಿತಿಗಳನ್ನು ಮೀರಿ ಆಸೆ, ಆಮಿಷಗಳ ದಾಸನಾದರೆ ಮನುಷ್ಯನ ಬದುಕನ್ನೇ ವಿಚಲಿತಗೊಳಿಸುತ್ತದೆ. ಪ್ರಸ್ತುತ ಮಾನವನ ಬದುಕಿನ ಸಂಗತಿಗಳನ್ನು ಗಮನಿಸಿದಾಗ, ಸುತ್ತಲಿನ ಸಮಾಜದಲ್ಲಿ ನಡೆಯುತ್ತಿರುವ ಆತಂಕಕಾರಿ ಘಟನೆಗಳನ್ನು ನೆನಪಿಸಿಕೊಂಡಾಗ, ಹಲವು ವಿಕೃತಿಗಳಿಗೆ ಮನುಷ್ಯನ ಮನಸ್ಥಿತಿಯೇ ಕಾರಣ ಎಂಬುದು ಸತ್ಯ.

ಇಂದು ಅವಸರದ ಬದುಕನ್ನು ಅರಸುತ್ತ ಹೊರಟಿರುವ ಮಾನವ ತನ್ನ ಅವನತಿಗೆ ತಾನೇ ಕಾರಣವಾಗುತ್ತಿರುವುದು ಬೂದಿ ಮುಚ್ಚಿದ ಕೆಂಡದಂತಿದೆ. ಜೀವನದ ಯಶಸ್ಸು, ವೈಫಲ್ಯ, ಸಂತೋಷ, ದುಃಖ, ಪ್ರೀತಿ, ದ್ವೇಷ, ಶಾಂತಿ, ಅಶಾಂತಿ ಹೀಗೆ ಎಲ್ಲ ರೀತಿಯ ಸಂವೇಗಗಳು ಮನುಷ್ಯನನ್ನು ಅನೇಕ ತಲ್ಲಣಗಳಿಗೆ ಗುರಿಮಾಡಿವೆ. ಮನುಷ್ಯ ಇಂದು ಏನೇ ಸಾಧಿಸಿದ್ದರೂ, ನೈಪುಣ್ಯ, ತಾಂತ್ರಿಕತೆ ಮತ್ತು ಕ್ರಿಯಾಶೀಲತೆ ಹೊಂದಿದ್ದರೂ, ಇವೆಲ್ಲವೂ ಮನಸ್ಸಿನ ಸ್ಥಿತಿಯನ್ನು ಅವಲಂಬಿಸಿವೆ.

ಸರಿಯಾದ ರೀತಿಯಲ್ಲಿ ಬಾಹ್ಯ ಪ್ರಪಂಚದ ಸಂವೇಗಗಳನ್ನು ಗ್ರಹಿಸಬೇಕಾದರೆ ಪಂಚೇಂದ್ರಿಯಗಳ ಸರಿಯಾದ ಕಾರ್ಯನಿರ್ವಹಣೆ ಅವಶ್ಯ. ಪಂಚೇಂದ್ರಿಯಗಳಲ್ಲಿ ತೊಡಕುಗಳಿದ್ದರೆ ಸಂವೇಗಗಳಲ್ಲಿ ವ್ಯತ್ಯಾಸ ಉಂಟಾಗುತ್ತದೆ. ಸಂದರ್ಭಗಳ ವ್ಯತ್ಯಾಸದಿಂದ ಮನುಷ್ಯ ಪಡೆಯುವ ಅನುಭವಗಳು ಸಕಾರಾತ್ಮಕವಾಗಿರಬಹುದು ಅಥವಾ ನಕಾರಾತ್ಮಕವೂ ಆಗಬಹುದು. ಅದು ಮಾನವ ಅಸ್ತಿತ್ವದ ಗಾಢ ಅನುಭವವಾಗಿದೆ.

ಮನಸ್ಸು ಅಗೋಚರವಾದುದು. ಅದಕ್ಕೆ ನಿರ್ದಿಷ್ಟ ಆಕಾರ, ಗಾತ್ರ ಅಥವಾ ತೂಕವಿಲ್ಲ. ಆದರೆ ಮನುಷ್ಯನ ಎಲ್ಲಾ ಕ್ರಿಯೆಗಳಿಗೆ ಅದು ಮುನ್ನುಡಿಯಾಗಿದೆ. ಮನಸ್ಸು



ಗೋಚರಿಸುವ ಅಂಗವಲ್ಲ. ಆದರೂ ಅದರ ಪ್ರಭಾವ ವಿಶ್ವದ ಯಾವುದೇ ಶಕ್ತಿಗಿಂತ ಕಡಿಮೆಯಿಲ್ಲ.

ಅದು ಕ್ಷಣಾರ್ಧದಲ್ಲಿ ಸಾವಿರಾರು ನೆನಪುಗಳನ್ನು ಮೆಲುಕು ಹಾಕುತ್ತದೆ. ಭವಿಷ್ಯದ ಕನಸುಗಳನ್ನು ಕಟ್ಟುತ್ತದೆ. ಭೂತಕಾಲದ ನೋವನ್ನು ಮತ್ತೆ ಅನುಭವಿಸುತ್ತದೆ. ಒಂದೇ ಕ್ಷಣದಲ್ಲಿ ಮನುಷ್ಯನನ್ನು ಶಿಖರಕ್ಕೇರಿಸಬಲ್ಲದು; ಮತ್ತೊಂದು ಕ್ಷಣದಲ್ಲಿ ನಿರಾಶೆಯ ಕಂದಕಕ್ಕೂ ತಳ್ಳಬಲ್ಲದು. ಮನುಷ್ಯನ ಪ್ರಜ್ಞಾವಂತಿಕೆ ಮನಸ್ಸನ್ನು ನಿಗ್ರಹಿಸಬಲ್ಲದು ಹಾಗೂ ನಿಯಂತ್ರಿಸಬಲ್ಲದು.

ಇಂದಿನ ತಂತ್ರಜ್ಞಾನ ಯುಗದಲ್ಲಿ ಮನಸ್ಸಿನ ಪಾತ್ರ ಇನ್ನಷ್ಟು ಸಂಕೀರ್ಣವಾಗಿದೆ. ಅವಶ್ಯಕತೆಗಾಗಿ ಆರಂಭವಾದ ತಾಂತ್ರಿಕ ಬಳಕೆ ಇಂದು ಮನುಷ್ಯನನ್ನೇ ಮಾಯಾಬಜಾರ್‌ನಲ್ಲಿ ಸುತ್ತಿಸುತ್ತಿದೆ. ಸಂವಹನಕ್ಕಾಗಿ ಬಳಸುವ ಮೊಬೈಲ್, ಅವಶ್ಯಕತೆಯನ್ನು ಮೀರಿ ನಮ್ಮನ್ನೇ ಆಳುತ್ತಿದೆ. ಅಂದರೆ, ನಾವೇ ಅದರ ವ್ಯಾಮೋಹಕ್ಕೆ ಬಲಿಯಾಗಿ ನಮ್ಮತನವನ್ನೇ ಮರೆಯುತ್ತಿದ್ದೇವೆ.

ಬದುಕಿನ ಚಿಕ್ಕಪುಟ್ಟ ಸಂಗತಿಗಳು ಜಗಜ್ಜಾಹೀರವಾಗುತ್ತಿವೆ. ಯಾವುದು ಅಲ್ಲ ಅದು ಹೌದು, ಯಾವುದು ಹೌದು ಅದು ಅಲ್ಲ ಎನ್ನುವ ತಾರ್ಕಿಕ ವಿಸ್ಮಯಕ್ಕೆ ನಾವು ಸಿಲುಕಿದ್ದೇವೆ. ಸಾಮಾಜಿಕ ಜಾಲತಾಣಗಳು, ಕೃತಕ ಬುದ್ಧಿಮತ್ತೆ, ನಿರಂತರ ಸ್ಪರ್ಧೆ, ಉದ್ಯೋಗದ ಒತ್ತಡ, ವಿದ್ಯಾಭ್ಯಾಸದ ಸವಾಲುಗಳು, ಬದುಕಿನ ನಿರ್ವಹಣೆ ಮುಂತಾದ ಅಂಶಗಳು ಮನಸ್ಸಿನ ಮೇಲೆ ಪರಿಣಾಮ ಬೀರುತ್ತಿವೆ. ಮಾಹಿತಿಯ ಪ್ರವಾಹ ಹೆಚ್ಚಾದರೂ ಮನಸ್ಸಿನ ನೆಮ್ಮದಿ ಕಡಿಮೆಯಾಗುತ್ತಿರುವುದು ಇಂದಿನ ಸಮಾಜದ ದೊಡ್ಡ ವೈಪರೀತ್ಯವಾಗಿದೆ.

ಇಂದಿನ ಯುವಜನರಲ್ಲಿ ಚಿತ್ತಚಾಂಚಲ್ಯ, ಆತಂಕ, ಖಿನ್ನತೆ, ಏಕಾಂತದ ಭಾವನೆ ಹಾಗೂ ಹೋಲಿಕೆಯ ಮನೋಭಾವ ಹೆಚ್ಚುತ್ತಿರುವುದಕ್ಕೆ ಪ್ರಮುಖ ಕಾರಣ ಮನಸ್ಸಿನ ಮೇಲಿನ ನಿಯಂತ್ರಣದ ಕೊರತೆ. ಸಾಮಾಜಿಕ ಜಾಲತಾಣಗಳಲ್ಲಿ ಇತರರ ಯಶಸ್ಸನ್ನು ಮಾತ್ರ ನೋಡುತ್ತಾ ತಮ್ಮ ಜೀವನವನ್ನು ಕಡಿಮೆ ಅಂದಾಜು ಮಾಡಿಕೊಳ್ಳುವ ಪ್ರವೃತ್ತಿ ಬೆಳೆಯುತ್ತಿದೆ.

ಇದರ ಪರಿಣಾಮ ಆತ್ಮವಿಶ್ವಾಸ ಕುಸಿಯುತ್ತಿದೆ. ಯಾರು ಯಾರಿಗೆ ಹೇಳಬೇಕು, ಯಾರನ್ನು ಯಾವ ರೀತಿಯಲ್ಲಿ ಸರಿದಾರಿಗೆ ತರಬೇಕು ಎನ್ನುವ ಗೊಂದಲದ ವಾತಾವರಣ ನಿರ್ಮಾಣವಾಗಿದೆ. ಅರಿವೇ ಗುರು ಎಂಬಂತೆ ನಮ್ಮನ್ನು ನಾವು ಅರಿತಾಗ ನಮ್ಮಿಂದ ಅದೆಷ್ಟೋ ಸಕಾರಾತ್ಮಕ ಬದಲಾವಣೆಗಳು ಸಾಧ್ಯವಾಗುತ್ತವೆ. ಆದ್ದರಿಂದ ಇಂದು ಕೇವಲ ಅಂಕಗಳಿಕೆಗಾಗಿ, ಬದುಕಿನ ತಯಾರಿಗಾಗಿ ಶಿಕ್ಷಣ ನೀಡುವ ಸಂಕುಚಿತ ಭಾವನೆ ಬದಲಾಗಬೇಕು. ಮನುಷ್ಯತ್ವದ ಬದುಕಿಗೆ ಉತ್ತಮ ನಡವಳಿಕೆಗಳನ್ನು ರೂಪಿಸುವ ಶಿಕ್ಷಣದ ಅಗತ್ಯವಿದೆ.

ಈ ಹಿನ್ನೆಲೆಯಲ್ಲಿ ಪ್ರಸ್ತುತ ಸಮಾಜದ ಪ್ರತಿಯೊಬ್ಬರೂ ಆತ್ಮಾವಲೋಕನ ಮಾಡಿಕೊಳ್ಳಬೇಕು. ಬದಲಾವಣೆ ಕೇವಲ ಹೊರಜಗತ್ತಿನಲ್ಲಿ ಅಲ್ಲ; ಅದು ಮೊದಲು ನಮ್ಮೊಳಗೆ ಆರಂಭವಾಗಬೇಕು.

ಮನಸ್ಸಿನ ಮತ್ತೊಂದು ವಿಸ್ಮಯವೆಂದರೆ ಅದರ ಸೃಜನಶೀಲತೆ. ಜಗತ್ತಿನ ಪ್ರತಿಯೊಂದು ಆವಿಷ್ಕಾರವೂ ಮೊದಲು ಯಾರೋ ಒಬ್ಬರ ಮನಸ್ಸಿನಲ್ಲಿ ಹುಟ್ಟಿದ ಕಲ್ಪನೆಯಾಗಿತ್ತು. ವಿಜ್ಞಾನ, ಸಾಹಿತ್ಯ, ಸಂಗೀತ, ಕಲೆ, ಸಂಶೋಧನೆ ಹಾಗೂ ಸಾಮಾಜಿಕ ಪರಿವರ್ತನೆಗಳು ಮನಸ್ಸಿನ ಸೃಜನಶೀಲ ಶಕ್ತಿಯ ಫಲಗಳಾಗಿವೆ.

ಉತ್ತಮ ಚಿಂತನೆಗಳು ವ್ಯಕ್ತಿಯನ್ನು ಮಾತ್ರವಲ್ಲ, ಸಮಾಜವನ್ನೂ ಬದಲಾಯಿಸುವ ಸಾಮರ್ಥ್ಯ ಹೊಂದಿವೆ.

ಭಾರತೀಯ ತತ್ತ್ವಶಾಸ್ತ್ರ ಮನಸ್ಸಿಗೆ ವಿಶೇಷ ಸ್ಥಾನ ನೀಡಿದೆ. ಉಪನಿಷತ್ತುಗಳು, ಭಗವದ್ಗೀತೆ ಹಾಗೂ ಬಸವಾದಿ ಶರಣರ ವಚನಗಳು ಮನಸ್ಸಿನ ಶುದ್ಧತೆ, ನಿಯಂತ್ರಣ ಮತ್ತು ಆತ್ಮಜ್ಞಾನವನ್ನು ಜೀವನದ ಮೂಲ ಮೌಲ್ಯಗಳಾಗಿ ಬೋಧಿಸಿವೆ.

ವಿಶ್ವಗುರು ಬಸವಣ್ಣನವರ ಕಾಯಕ ಮತ್ತು ದಾಸೋಹದ ತತ್ವಗಳು ಮನಸ್ಸನ್ನು ಸ್ವಾರ್ಥದಿಂದ ಸೇವೆಯ ಕಡೆಗೆ ಕೊಂಡೊಯ್ಯುತ್ತವೆ. ಈ ಮೌಲ್ಯಗಳು ಬದುಕಿನಲ್ಲಿ ಅನ್ವಯವಾಗಬೇಕಿದೆ.

ಭಗವಾನ್ ಬುದ್ಧ ಮನಸ್ಸಿನ ಶಾಂತಿಯೇ ನಿಜವಾದ ಸುಖವೆಂದು ಬೋಧಿಸಿದನು. ಮನಸ್ಸಿಗೆ ಶಾಂತಿ ಬೇಕಾದರೆ ಬದುಕಿನ ವಾಸ್ತವವನ್ನು ಇದ್ದಂತೆಯೇ ಅರ್ಥೈಸಿಕೊಳ್ಳಬೇಕು. ಜೀವನ ದುಃಖಮಯ, ಬದುಕು ಶಾಶ್ವತವಲ್ಲ. ಹುಟ್ಟು ಖುಷಿ ನೀಡಿದರೆ, ಸಾವು ದುಃಖ ನೀಡುತ್ತದೆ ಎಂಬ ಸತ್ಯವನ್ನು ಅರಿತು ಸಾಗಬೇಕು. ಅತಿ ಆಸೆಯೇ ದುಃಖಕ್ಕೆ ಕಾರಣ. ಆದ್ದರಿಂದ ಅತಿ ಆಸೆಗಳನ್ನು ತ್ಯಜಿಸಿದಾಗ ಮನಸ್ಸು ಹಿತಮಿತವಾದ ಬದುಕಿನ ಅನುಭವವನ್ನು ನೀಡಬಲ್ಲದು.

ಅಂಕಗಳ ಸ್ಪರ್ಧೆಗಿಂತ ಆತ್ಮವಿಶ್ವಾಸ, ಸಹಾನುಭೂತಿ, ಮಾನವೀಯತೆ, ಸೃಜನಶೀಲತೆ ಹಾಗೂ ಭಾವನಾತ್ಮಕ ಸಮತೋಲನವನ್ನು ಬೆಳೆಸುವ ಶಿಕ್ಷಣವೇ ಇಂದಿನ ಅಗತ್ಯ. ಪೋಷಕರು ಮಕ್ಕಳ ಮನಸ್ಸನ್ನು ಅರ್ಥಮಾಡಿಕೊಳ್ಳಬೇಕು. ಶಿಕ್ಷಕರು ಪ್ರೋತ್ಸಾಹದ ಮಾತುಗಳ ಮೂಲಕ ಅವರ ಆತ್ಮಸ್ಥೈರ್ಯವನ್ನು ಹೆಚ್ಚಿಸಬೇಕು.

ಮನಸ್ಸನ್ನು ಆರೋಗ್ಯವಾಗಿಡಲು ಕೆಲವು ಜೀವನ ಮೌಲ್ಯಗಳು ಅಗತ್ಯ.

1. **ಸಕಾರಾತ್ಮಕ ಚಿಂತನೆ ಬೆಳೆಸುವುದು.**
2. **ಪ್ರತಿದಿನ ಸ್ವಲ್ಪ ಸಮಯ ಆತ್ಮಾವಲೋಕನ ಅಥವಾ ಧ್ಯಾನ ಮಾಡುವುದು.**
3. **ಉತ್ತಮ ಪುಸ್ತಕಗಳನ್ನು ಓದುವ ಅಭ್ಯಾಸ ಬೆಳೆಸುವುದು.**
4. **ಪ್ರಕೃತಿಯೊಂದಿಗೆ ಸಮಯ ಕಳೆಯುವುದು.**
5. **ಇತರರೊಂದಿಗೆ ಹೋಲಿಕೆ ಮಾಡುವುದನ್ನು ಕಡಿಮೆ ಮಾಡುವುದು.**
6. **ಕುಟುಂಬ ಮತ್ತು ಸ್ನೇಹಿತರೊಂದಿಗೆ ಮುಕ್ತ ಸಂವಾದ ನಡೆಸುವುದು.**
7. **ಸೇವಾ ಮನೋಭಾವ ಹಾಗೂ ಕೃತಜ್ಞತೆಯನ್ನು ಜೀವನದ ಭಾಗವಾಗಿಸಿಕೊಳ್ಳುವುದು.**
8. **ಇಂತಹ ಅಮೂಲ್ಯವಾದ ವಿಚಾರಧಾರೆಗಳು ನಮ್ಮೊಳಗಿದ್ದಾಗ ಮನಸ್ಸು ಸುಂದರ ಬದುಕನ್ನು ರೂಪಿಸಬಲ್ಲದು.**

ಮನಸ್ಸಿನ ನಿಜವಾದ ಸೌಂದರ್ಯ ಅದರ ಕರುಣೆ, ಕ್ಷಮೆ, ಪ್ರೀತಿ ಮತ್ತು ಮಾನವೀಯತೆಯಲ್ಲಿ ಅಡಗಿದೆ. ಹೊರಗಿನ ಸೌಂದರ್ಯ ಕಾಲಕ್ರಮೇಣ ಮಸುಕಾಗಬಹುದು. ಆದರೆ ಒಳ್ಳೆಯ ಮನಸ್ಸಿನ ಬೆಳಕು ಸದಾ ಶಾಶ್ವತವಾಗಿರುತ್ತದೆ. ಆದ್ದರಿಂದ ಮನಸ್ಸನ್ನು ಗೆದ್ದವನು ಲೋಕವನ್ನೇ ಗೆಲ್ಲಬಲ್ಲನು.

ಮನಸ್ಸನ್ನು ಅರಿತವನು ತನ್ನ ಬದುಕಿನ ದಿಕ್ಕನ್ನು ಅರಿಯುತ್ತಾನೆ. ಮನಸ್ಸನ್ನು ನಿಯಂತ್ರಿಸಿದವನು ಸಂಕಷ್ಟದಲ್ಲಿಯೂ ಸಮಚಿತ್ತದಿಂದ ಬದುಕುತ್ತಾನೆ.



ಆದ್ದರಿಂದ ನಮ್ಮ ಮನಸ್ಸನ್ನು ಉತ್ತಮ ಆಲೋಚನೆಗಳಿಂದ ಸದೃಢಗೊಳಿಸಬೇಕಿದೆ.

– **ಶ್ರೀಮತಿ ಸುಧಾ ಹುಚ್ಚಣ್ಣವರ,** ಗದಗ

ಬೀಚಿ ಬಳಗದ ಮಾಸಿಕ ಸಭೆಯಲ್ಲಿ ಹೃದಯಾಘಾತದ ಕಾರಣ, ಲಕ್ಷಣ ಹಾಗೂ ಮುನ್ನೆಚ್ಚರಿಕೆ ಕುರಿತು ಉಪನ್ಯಾಸ

# ಹೃದಯದ ಆರೋಗ್ಯ ಕಾಪಾಡುವುದು ಪ್ರತಿಯೊಬ್ಬರ ಹೊಣೆ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಹೃದಯವು ದೇವರು ಸೃಷ್ಟಿಸಿದ ಅತ್ಯಮೂಲ್ಯ ಅಂಗವಾಗಿದ್ದು, ದೇಹದ ಪ್ರತಿಯೊಂದು ಭಾಗಕ್ಕೂ ರಕ್ತ ಹಾಗೂ ಪೋಷಕಾಂಶಗಳನ್ನು ಪೂರೈಸುವ ಮಹತ್ವದ ಕಾರ್ಯ ನಿರ್ವಹಿಸುತ್ತದೆ. ಆದ್ದರಿಂದ ಪ್ರತಿಯೊಬ್ಬರೂ ಹೃದಯದ ಆರೋಗ್ಯದ ಬಗ್ಗೆ ವಿಶೇಷ ಕಾಳಜಿ ವಹಿಸಬೇಕು ಎಂದು ವೈದ್ಯರಾದ ಡಾ. ಸಮುದ್ರಿ ಹೇಳಿದರು.

ಪಟ್ಟಣದ ಹಿರೇಮಠ ಸಭಾಭವನದಲ್ಲಿ ನಡೆದ ಬೀಚಿ ಬಳಗದ ಮಾಸಿಕ ಸಭೆಯಲ್ಲಿ ಹೃದಯಾಘಾತ ಹೇಗೆ? ಪರಿಹಾರ ಏನು? ವಿಷಯದ ಕುರಿತು ಉಪನ್ಯಾಸ ನೀಡಿದ ಅವರು, ಹೃದಯಾಘಾತಕ್ಕೆ ಆನುವಂಶೀಯ ಕಾರಣಗಳೂ ಇರಬಹುದು. ರಕ್ತದಲ್ಲಿ ಕೊಬ್ಬಿನ ಪ್ರಮಾಣ ಹೆಚ್ಚಾಗದಂತೆ ನೋಡಿಕೊಳ್ಳಬೇಕು. ತಂಬಾಕು, ಗುಟ್ಕಾ, ಮದ್ಯಪಾನ ಸೇರಿದಂತೆ ದುಶ್ಚಟಗಳು ರಕ್ತನಾಳಗಳಿಗೆ ಹಾನಿ ಉಂಟುಮಾಡಿ ಹೃದಯಾಘಾತದ ಅಪಾಯವನ್ನು ಹೆಚ್ಚಿಸುತ್ತವೆ ಎಂದು ಹೇಳಿದರು. ಜಿಡ್ಡಿನ ಆಹಾರ ಸೇವನೆಯನ್ನು ಕಡಿಮೆ ಮಾಡಬೇಕು. ತಲೆತಿರುಗುವುದು, ಅತಿಯಾದ ಬೆವರು, ಹಠಾತ್ ಕುಸಿದು ಬೀಳುವುದು ಮುಂತಾದ ಲಕ್ಷಣಗಳನ್ನು ನಿರ್ಲಕ್ಷಿಸದೆ ತಕ್ಷಣ ವೈದ್ಯರನ್ನು ಸಂಪರ್ಕಿಸಬೇಕು. ರಕ್ತ ಹೆಪ್ಪುಗಟ್ಟದಂತೆ ವೈದ್ಯರ ಸಲಹೆಯಂತೆ ಅಗತ್ಯ ಮುನ್ನೆಚ್ಚರಿಕೆಗಳನ್ನು ಪಾಲಿಸುವುದು ಮುಖ್ಯ ಎಂದರು. ಹೃದಯದ ಆರೋಗ್ಯಕ್ಕಾಗಿ ನಿಯಮಿತವಾಗಿ ಇಸಿಜಿ ಸೇರಿದಂತೆ ಅಗತ್ಯ ಪರೀಕ್ಷೆಗಳನ್ನು ಮಾಡಿಸಿಕೊಳ್ಳಬೇಕು. ಹೃದಯಾಘಾತಕ್ಕೆ ಈಗ ಪರಿಣಾಮಕಾರಿ ಚಿಕಿತ್ಸಾ ವಿಧಾನಗಳು ಲಭ್ಯವಿವೆ ಎಂದು ತಿಳಿಸಿದರು.

ಗ್ರಾಮೀಣ ಪ್ರದೇಶದ ಜನರು ಹೆಚ್ಚು ಶಾರೀರಿಕ ಚಟುವಟಿಕೆಯಲ್ಲಿ ತೊಡಗಿರುವುದರಿಂದ ನಗರ ಪ್ರದೇಶಗಳಿಗೆ ಹೋಲಿಸಿದರೆ ಹೃದಯಾಘಾತದ ಪ್ರಕರಣಗಳು ಕಡಿಮೆ ಕಂಡುಬರುತ್ತವೆ ಎಂದು ಹೇಳಿದರು. ಸಭೆಯ ಅಧ್ಯಕ್ಷತೆ ವಹಿಸಿದ್ದ ಶಿವಯೋಗಿ ಜಕ್ಕಲಿ ಮಾತನಾಡಿ, ಹೃದಯದ ಆರೋಗ್ಯ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಇಂತಹ ಉಪನ್ಯಾಸಗಳು ಅಗತ್ಯವಾಗಿದ್ದು, ಎಲ್ಲರೂ ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು ಎಂದು ಹೇಳಿದರು. ವೇದಿಕೆಯಲ್ಲಿ ಕೆ.ಎಸ್. ಕಳಕಣ್ಣವರ, ಜೆ.ಎ. ಪಾಟೀಲ ಹಾಗೂ ಭಾರತಿ ಶಿರ್ಸಿ ಉಪಸ್ಥಿತರಿದ್ದರು. ಸಭೆಯಲ್ಲಿ ರಾಜಶೇಖರಗೌಡ ಪಾಟೀಲ, ಶಿವಾನಂದ ಗೋಗೇರಿ, ಈಶ್ವರ ಬೆಟಗೇರಿ, ಗುರುಪಾದಪ್ಪ ಬೆಲ್ಲದ, ಡಾ. ಲಿಂಗಯ್ಯ ಗೌರಿ, ಶ್ರೀಪಾದ ಕುಲಕರ್ಣಿ, ಭರಮಪ್ಪ ತಾಳಿ, ಅಣ್ಣಿಗೇರಿ,


**ಹೃದಯವು ದೇಹದ ಜೀವನಾಡಿ. ಆರೋಗ್ಯಕರ ಆಹಾರ, ನಿಯಮಿತ ವ್ಯಾಯಾಮ ಮತ್ತು ಒತ್ತಡರಹಿತ ಜೀವನಶೈಲಿಯೇ ಹೃದಯಾಘಾತದಿಂದ ದೂರವಿರಲು ಉತ್ತಮ ಮಾರ್ಗ.**

– **ಡಾ. ಸಮುದ್ರಿ**

ರಾಚಯ್ಯ ಮಠ, ಸಂಗೀತಾ ಮುಚಖಂಡಿ, ಬಸವರಾಜ ಕಲಾಲಬಂಡಿ, ಬಸವರಾಜ ಉಪ್ಪಿನ, ಡಾ. ರಾಜೇಂದ್ರ ಗಚ್ಚಿನಮಠ, ಸಂಗಮೇಶ ಮೆಣಸಿಗಿ, ಮಲ್ಲಯ್ಯ ಗುಂಡಗೋಪುರಮಠ ಹಾಗೂ ನಿರ್ಮಲಾ ಹಿರೇಮಠ ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿಗಳು

### ಮತದಾರರ ಪಟ್ಟಿ ಪರಿಷ್ಕರಣೆಗೆ ಬಿಜೆಪಿ ಮಹಾ ಸಂಪರ್ಕ ಅಭಿಯಾನ



**ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ಕೇಂದ್ರ ಚುನಾವಣಾ ಆಯೋಗದ ನಿರ್ದೇಶನದಂತೆ ನಡೆಯುತ್ತಿರುವ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್-2026) ಹಿನ್ನೆಲೆಯಲ್ಲಿ ಭಾರತೀಯ ಜನತಾ ಪಕ್ಷದ ವತಿಯಿಂದ ಬೆಟಗೇರಿ ನಗರದ ವಾರ್ಡ್ ಸಂಖ್ಯೆ 7ರಲ್ಲಿ ಮಹಾ ಸಂಪರ್ಕ ಅಭಿಯಾನ ನಡೆಸಲಾಯಿತು.

ನಗರಸಭೆ ಸದಸ್ಯ ರಾಘವೇಂದ್ರ ಯಳವತ್ತಿ ನೇತೃತ್ವದಲ್ಲಿ ನಡೆದ ಅಭಿಯಾನದಲ್ಲಿ ವಿಧಾನ ಪರಿಷತ್ ಸದಸ್ಯ ಹಾಗೂ ಬಿಜೆಪಿ ಹಿರಿಯ ಮುಖಂಡ ಎಸ್.ವಿ. ಸಂಕನೂರ ಭಾಗವಹಿಸಿ, ಬೂತ್ ಸಂಖ್ಯೆ 42 ಮತ್ತು 43 ವ್ಯಾಪ್ತಿಯ ವಿವಿಧ ಮನೆಗಳಿಗೆ ಭೇಟಿ ನೀಡಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಿದರು.

ಮತದಾರರು ತಮ್ಮ ವಿವರಗಳನ್ನು ಪರಿಶೀಲಿಸಿ, ಅಗತ್ಯ ಮಾಹಿತಿಯನ್ನು ಸರಿಯಾಗಿ ನಮೂದಿಸಿ ಅರ್ಜಿಗಳನ್ನು ಸಲ್ಲಿಸಬೇಕು. ಪ್ರತಿಯೊಬ್ಬ ಅರ್ಹ ನಾಗರಿಕರು ಮತದಾನದ ಹಕ್ಕು ಪಡೆಯುವಂತೆ ಜಾಗೃತಿ ಮೂಡಿಸುವ ಉದ್ದೇಶದಿಂದ ಈ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಎಸ್.ವಿ. ಸಂಕನೂರ ತಿಳಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ನಗರಾಧ್ಯಕ್ಷ ಸುರೇಶ್ ಮರಳಪ್ಪನವರ, ಹಿರಿಯ ಮುಖಂಡ ಚನ್ನಪ್ಪ ನೆಗಳೂರ, ಪಕ್ಷದ ಬೂತ್ ಮಟ್ಟದ ಅಧ್ಯಕ್ಷರು ಹಾಗೂ ಕಾರ್ಯಕರ್ತರಾದ ಕೃಷ್ಣ ಲಕ್ಕುಂಡಿ, ಮೈಲಾರಿ ತುರಕಾಣಿ, ಅನೀಲ ಚೋಳಿನ್, ಸುರೇಶ್ ಕೊಳ್ಳಿ, ರವಿ ಗಂಜಿ, ಸಿದ್ದು ಪಿಂಡಕೂರ, ಮಲ್ಲಿಕಾರ್ಜುನ ಬೆಲೇರಿ, ಹರೀಶ್ ಬೆಲೇರಿ, ಈರಣ್ಣ ಬ್ಯಾಹಟ್ಟಿ, ಸಲೀಂ ಮುಳಗುಂದ, ರಾಘವೇಂದ್ರ ಕೋಪರ್ಡೆ, ಜ್ಞಾನೋಬ ಪಂತಗಿ ಸೇರಿದಂತೆ ಹಲವರು ಮಹಾ ಸಂಪರ್ಕ ಅಭಿಯಾನದಲ್ಲಿ ಭಾಗವಹಿಸಿ ಎಸ್‌ಐಆರ್-2026 ಕಾರ್ಯಕ್ಕೆ ಸಾಥ್ ನೀಡಿದರು.

### ಮುದ್ದೇನಹಳ್ಳಿಯಲ್ಲಿ ರೂರಲ್ ಶೋರ್ಸ್ AI ಕೌಶಲ್ಯ ಮತ್ತು ಅನುಭವ ಕೇಂದ್ರ ಉದ್ಘಾಟನೆ




**ವಿಜಯಸಾಕ್ಷಿ ಸುದ್ದಿ, ಚಿಕ್ಕಬಳ್ಳಾಪುರ**

ಕೃತಕ ಬುದ್ಧಿಮತ್ತೆ (GI) ತಂತ್ರಜ್ಞಾನವು ನಗರ ಪ್ರದೇಶಗಳಿಗೆ ಮಾತ್ರ ಸೀಮಿತವಾಗದೆ, ಗ್ರಾಮೀಣ ಭಾಗದ ಪ್ರತಿಭಾವಂತ ಯುವಜನರಿಗೂ ತಲುಪಿದಾಗ ಮಾತ್ರ ದೇಶದ ನೈಜ ಅಭಿವೃದ್ಧಿ ಸಾಧ್ಯ ಎಂದು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಹೇಳಿದರು.

ಚಿಕ್ಕಬಳ್ಳಾಪುರ ತಾಲೂಕಿನ ಮುದ್ದೇನಹಳ್ಳಿಯ ಸತ್ಯಸಾಯಿ ಗ್ರಾಮದಲ್ಲಿ ಆರಂಭಗೊಂಡ ರೂರಲ್ ಶೋರ್ಸ್ AI ಕೌಶಲ್ಯ ಮತ್ತು ಅನುಭವ ಕೇಂದ್ರ ಉದ್ಘಾಟಿಸಿ ಮಾತನಾಡಿದ ಅವರು, ತಂತ್ರಜ್ಞಾನವು ವೇಗವಾಗಿ ಬೆಳೆಯುತ್ತಿರುವ ಈ ಕಾಲಘಟ್ಟದಲ್ಲಿ ಎಐಗೆ ಕರುಣೆ, ನೈತಿಕತೆ ಹಾಗೂ ಮಾನವೀಯ ಮೌಲ್ಯಗಳ ಸ್ಪರ್ಶ ಅಗತ್ಯವಾಗಿದೆ. ತಂತ್ರಜ್ಞಾನವು ಮಾನವನ ಬುದ್ಧಿವಂತಿಕೆ ಮತ್ತು ಸದ್ಗುಣಗಳನ್ನು ಬೆಳೆಸುವ ಸಾಧನವಾಗಬೇಕು ಎಂದು ಅಭಿಪ್ರಾಯಪಟ್ಟರು.

ಕಳೆದ 18 ವರ್ಷಗಳಿಂದ ಗ್ರಾಮೀಣ ಭಾಗದ ಯುವಜನರಿಗೆ ಅವರ ಊರಿನಲ್ಲಿಯೇ ಉದ್ಯೋಗಾವಕಾಶ ಕಲ್ಪಿಸುವ ಮೂಲಕ ನಗರಗಳಿಗೆ ವಲಸೆ ಹೋಗುವುದನ್ನು ತಡೆಯುವ ಕೆಲಸವನ್ನು ರೂರಲ್ ಶೋರ್ಸ್ ಸಂಸ್ಥೆ ಮಾಡುತ್ತಿರುವುದು ಶ್ಲಾಘನೀಯ. ಈವರೆಗೆ ಸುಮಾರು 30 ಸಾವಿರಕ್ಕೂ ಹೆಚ್ಚು ಯುವಕ-ಯುವತಿಯರಿಗೆ ತರಬೇತಿ ಮತ್ತು ಉದ್ಯೋಗ ಕಲ್ಪಿಸಿದ್ದು, ಅಮೆರಿಕದಲ್ಲೂ ಪೀಪಲ್‌ಶೋರ್ಸ್ ಮೂಲಕ ಸುಮಾರು 500 ಮಹಿಳೆಯರಿಗೆ ಉದ್ಯೋಗ ನೀಡಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು.

ಉಚಿತ ಶಿಕ್ಷಣ, ಉಚಿತ ಆರೋಗ್ಯ ಸೇವೆ ಹಾಗೂ ಪೌಷ್ಟಿಕ ಆಹಾರವನ್ನು ಮೂಲಭೂತ ಹಕ್ಕಾಗಿ ಒದಗಿಸುವ ಗುರಿಯೊಂದಿಗೆ ಸದ್ಗುರು ಶ್ರೀ ಮಧುಸೂದನ ಸಾಯಿ ಅವರ ಮಾರ್ಗದರ್ಶನದಲ್ಲಿ ನಡೆಯುತ್ತಿರುವ ಸೇವಾ ಕಾರ್ಯಗಳು ಸಮಾಜಕ್ಕೆ ಮಾದರಿಯಾಗಿವೆ. ಗ್ರಾಮೀಣ ಪ್ರದೇಶದಲ್ಲಿ ಸ್ಥಾಪಿಸಿರುವ ಉಚಿತ ವೈದ್ಯಕೀಯ ಕಾಲೇಜು ಸೇರಿದಂತೆ ಹಲವು ಯೋಜನೆಗಳು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪುತ್ತಿರುವುದು ಶ್ಲಾಘನೀಯ ಎಂದು ಹೇಳಿದರು.

ಕರ್ನಾಟಕ ದೇಶದ ತಂತ್ರಜ್ಞಾನ ರಾಜಧಾನಿಯಾಗಿ ಬೆಳೆಯುತ್ತಿದ್ದು, ಇಂತಹ ಎಐ ಕೌಶಲ್ಯ ಕೇಂದ್ರಗಳು ಗ್ರಾಮೀಣ ಯುವಜನರನ್ನು ಭವಿಷ್ಯದ ತಂತ್ರಜ್ಞಾನಕ್ಕೆ ಸಜ್ಜುಗೊಳಿಸಲಿವೆ. ಜಾಗತಿಕ ತಂತ್ರಜ್ಞಾನ ಕ್ಷೇತ್ರದಲ್ಲಿ ಭಾರತದ ನಾಯಕತ್ವಕ್ಕೆ ಗ್ರಾಮೀಣ ಪ್ರತಿಭೆಗಳ ಕೊಡುಗೆ ಮಹತ್ವದ್ದಾಗಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಸದ್ಗುರು ಶ್ರೀ ಮಧುಸೂದನ ಸಾಯಿ, ರೂರಲ್ ಶೋರ್ಸ್ ಸಂಸ್ಥೆಯ ನಿರ್ದೇಶಕರು, ವಿವಿಧ ಗಣ್ಯರು, ದೇಶ-ವಿದೇಶಗಳಿಂದ ಆಗಮಿಸಿದ್ದ ಭಕ್ತರು ಹಾಗೂ ನೂರಾರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ನಿಧನ
### ಸಂಗನಬಸಮ್ಮ ಯಲ್ಲಪ್ಪಗೌಡ್ರ

**ನರೇಗಲ್ಲ:** ಸಮೀಪದ ಬೂದಿಹಾಳ ಗ್ರಾಮದ ನಿವಾಸಿ ಸಂಗನಬಸಮ್ಮ



ಅಡಿವೆಪ್ಪಗೌಡ ಯಲ್ಲಪ್ಪಗೌಡ್ರ (85) ಅವರು ಸೋಮವಾರ ನಿಧನರಾದರು. ಮೃತರು ಪುತ್ರ, ನಾಲ್ವರು ಪುತ್ರಿಯರು, ಮೊಮ್ಮಕ್ಕಳು, ಮರಿ ಮೊಮ್ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ಬೂದಿಹಾಳ ಗ್ರಾಮದ ರುದ್ರಭೂಮಿಯಲ್ಲಿ ಮಂಗಳವಾರ ಮಧ್ಯಾಹ್ನ12ಕ್ಕೆ ನೆರವೇರಲಿದೆ.

---

ಕೌಜಗೇರಿಯಲ್ಲಿ ನೂತನ ಮಠದ ಉದ್ಘಾಟನೆ | ವೈಭವದಿಂದ ಜರುಗಿದ ಶ್ರೀ ರಂಭಾಪುರಿ ಜಗದ್ಗುರುಗಳ ಅಡ್ಡಪಲ್ಲಕ್ಕಿ ಮಹೋತ್ಸವ


# ಧರ್ಮ ಪಾಲನೆಯಿಂದಲೇ ಜೀವನಕ್ಕೆ ಶಾಂತಿ, ಸಮೃದ್ಧಿ

**ವಿಜಯಸಾಕ್ಷಿ ಸುದ್ದಿ, ರೋಣ**

ಮನುಷ್ಯನ ಆದರ್ಶ ಬದುಕಿಗೆ ಉತ್ತಮ ಚಿಂತನೆಗಳು ಅಗತ್ಯವಾಗಿದ್ದು, ಜೀವನದ ಉನ್ನತಿ, ಸಮೃದ್ಧಿ ಹಾಗೂ ಶಾಂತಿಗಾಗಿ ಧರ್ಮ ಪಾಲನೆ ಅತ್ಯಂತ ಮುಖ್ಯ ಎಂದು ಬಾಳೆಹೊನ್ನೂರಿನ ಶ್ರೀ ರಂಭಾಪುರಿ ಪೀಠದ ಜಗದ್ಗುರು ಡಾ. ವೀರಸೋಮೇಶ್ವರ ಶಿವಾಚಾರ್ಯ ಮಹಾಸ್ವಾಮೀಜಿ ಹೇಳಿದರು.

ರೋಣ ತಾಲೂಕಿನ ಕೌಜಗೇರಿ ಗ್ರಾಮದಲ್ಲಿ ಶ್ರೀಮದ್ ರಂಭಾಪುರಿ ಶಾಖಾ ಹಿರೇಮಠದ ನೂತನ ಮಠದ ಉದ್ಘಾಟನೆ ಹಾಗೂ ಶ್ರೀ ಜಗದ್ಗುರು ರೇಣುಕಾಚಾರ್ಯ ಮಂಗಲಮೂರ್ತಿ ಪ್ರತಿಷ್ಠಾಪನೆ ಅಂಗವಾಗಿ ನಡೆದ ಜನಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ದೇಹವು ದೇವರ ದೇಗುಲವಾಗಿದ್ದು, ಸತ್ಯ, ಶಾಂತಿ ಸೇರಿದಂತೆ ದೈವೀ ಗುಣಗಳನ್ನು ಬೆಳೆಸಿಕೊಳ್ಳಬೇಕು. ಮನಸ್ಸಿನಲ್ಲಿರುವ ಅಸುರೀ ಗುಣಗಳನ್ನು ತೊರೆದು ಪರಿಶುದ್ಧ ಬದುಕು ನಡೆಸಿದಾಗ ಮಾತ್ರ ಜೀವನ ಸಾರ್ಥಕವಾಗುತ್ತದೆ ಎಂದು ಹೇಳಿದರು.

ಅಧರ್ಮಕ್ಕೆ ಹಲವು ದಾರಿಗಳಿದ್ದರೂ ಧರ್ಮದ ಮಾರ್ಗ ಒಂದೇ. ಶ್ರೀ ಜಗದ್ಗುರು ರೇಣುಕಾಚಾರ್ಯರು ಸಿದ್ಧಾಂತ ಶಿಖಾಮಣಿಯಲ್ಲಿ ಬೋಧಿಸಿದ ಜೀವನ



ಮೌಲ್ಯಗಳು ಹಾಗೂ ಅಹಿಂಸಾದಿ ದಶಧರ್ಮ ಸೂತ್ರಗಳು ಇಂದಿಗೂ ಜೀವನ ವಿಕಾಸಕ್ಕೆ ದಾರಿದೀಪವಾಗಿವೆ ಎಂದು ಅವರು ತಿಳಿಸಿದರು.

ಕೌಜಗೇರಿ ಹಿರೇಮಠವು ರಂಭಾಪುರಿ ಪೀಠದ ಶಾಖಾಮಠವಾಗಿದ್ದು, ನೂತನ ಮಠ ನಿರ್ಮಿಸಿ ಶ್ರೀ ಜಗದ್ಗುರು ರೇಣುಕಾಚಾರ್ಯರ ಮಂಗಲಮೂರ್ತಿ ಪ್ರತಿಷ್ಠಾಪಿಸಿರುವುದು ಸಂತಸದ ಸಂಗತಿಯಾಗಿದೆ. ಇದಕ್ಕಾಗಿ ಶ್ರಮಿಸಿದ ಸದ್ಭಕ್ತರಿಗೆ ಅಭಿನಂದನೆ ಸಲ್ಲಿಸಿದರು.

ಸಮಾರಂಭದ ನೇತೃತ್ವ ವಹಿಸಿದ್ದ ಸೂಡಿ ಜುಕ್ತಿ ಹಿರೇಮಠದ ಡಾ. ಕೊಟ್ಟೂರು ಬಸವೇಶ್ವರ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಹಣತೆ ಬೆಳಗುತ್ತದೆ, ಉರಿಯುವುದಿಲ್ಲ; ಆದರೆ ಮನುಷ್ಯ ಉರಿಯುತ್ತಿದ್ದಾನೆ, ಬೆಳಗುತ್ತಿಲ್ಲ. ಯಾವುದೇ ಕೆಲಸವನ್ನು ಶುದ್ಧ ಮನಸ್ಸಿನಿಂದ ಮಾಡಿದಾಗ ಅದರ ಫಲ ದೊಡ್ಡದಾಗುತ್ತದೆ. ಮುರಿಯುವುದಕ್ಕಿಂತ ಜೋಡಿಸುವುದು, ಕೆಡವುವುದಕ್ಕಿಂತ ಕಟ್ಟುವುದು ಸಮಾಜದ ಸೌಹಾರ್ದಕ್ಕೆ ಅಗತ್ಯ ಎಂದರು.

ಬೆನಹಾಳ ಹಿರೇಮಠದ ಸದಾಶಿವ ಮಹಾಂತ ಶಿವಾಚಾರ್ಯ ಸ್ವಾಮೀಜಿ ಪ್ರಾತಃಕಾಲದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಮೂರ್ತಿ ಪ್ರತಿಷ್ಠಾಪನೆ ವಿಧಿವಿಧಾನಗಳನ್ನು ನೆರವೇರಿಸಿದರು.

ಕಾರ್ಯಕ್ರಮದಲ್ಲಿ ಯಲಬುರ್ಗಾ ಶ್ರೀಧರಮುರಡಿ ಹಿರೇಮಠದ ಬಸವೇಶ್ವರ ಶಿವಾಚಾರ್ಯರು, ನರಗುಂದ ಪತ್ರಿವನಮಠದ ಡಾ. ಗುರುಸಿದ್ಧವೀರ ಶಿವಾಚಾರ್ಯರು,

> ಜೀವನದ ಸಮೃದ್ಧಿ ಮತ್ತು ಶಾಂತಿಗೆ ಧರ್ಮ ಪಾಲನೆ ಅತ್ಯಗತ್ಯ. ಮನುಷ್ಯನ ಆದರ್ಶ ಬದುಕಿಗೆ ಉತ್ತಮ ಚಿಂತನೆಗಳೇ ಅಡಿಪಾಯ.
> **- ಡಾ. ವೀರಸೋಮೇಶ್ವರ ಶಿವಾಚಾರ್ಯ ಮಹಾಸ್ವಾಮೀಜಿ, ಶ್ರೀ ರಂಭಾಪುರಿ ಪೀಠ**

ರಾಜೂರ-ಅಡ್ನೂರಿನ ಅಭಿನವ ಪಂಚಾಕ್ಷರ ಶಿವಾಚಾರ್ಯರು, ಅಸೂಟಿ ಹಿರೇಮಠದ ರೇವಣಸಿದ್ಧಯ್ಯ ಸ್ವಾಮೀಜಿ, ಜಗದೀಶಯ್ಯ ಹಿರೇಮಠ ಹಾಗೂ ಸಿದ್ಧಲಿಂಗಯ್ಯ ಹಿರೇಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಶಶಿಧರ ಭಿಕ್ಷಾವರ್ತಿಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ವೀರೇಶ ವಾಲಿ ಸ್ವಾಗತಿಸಿದರು. ರಾಜೇಶ್ವರಿ ಮತ್ತು ಸೌಜನ್ಯ ಹಿರೇಮಠ ಪ್ರಾರ್ಥನೆ ನೆರವೇರಿಸಿದರು. ಪ್ರವೀಣ ಔದಕ್ಕನವರ ಕಾರ್ಯಕ್ರಮ ನಿರೂಪಿಸಿದರು.

ಇದಕ್ಕೂ ಮುನ್ನ ಗ್ರಾಮದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳ ಅಡ್ಡಪಲ್ಲಕ್ಕಿ ಮಹೋತ್ಸವ ವೈಭವದಿಂದ ಜರುಗಿತು. ಬಳಿಕ ಅನ್ನದಾಸೋಹ ನಡೆಯಿತು. ಗ್ರಾಮದ ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಭಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಿದರು.

---

ಉಚಿತ ಮಕ್ಕಳ ಆರೋಗ್ಯ ತಪಾಸಣಾ ಶಿಬಿರದಲ್ಲಿ ಡಾ. ಪಾಂಡುರಂಗಸಾ ಕಬಾಡಿ

## ಮಕ್ಕಳ ಆರೋಗ್ಯವೇ ರಾಷ್ಟ್ರದ ಸಂಪತ್ತು



**ವಿಜಯಸಾಕ್ಷಿ ಸುದ್ದಿ, ಗದಗ**

ಮಕ್ಕಳಿಗೆ ಉತ್ತಮ ಆರೋಗ್ಯ, ಗುಣಮಟ್ಟದ ಶಿಕ್ಷಣ ಹಾಗೂ ಸಂಸ್ಕಾರಯುತ ಬದುಕು ಕಲ್ಪಿಸುವುದೇ ಸಮಾಜದ ಉಜ್ವಲ ಭವಿಷ್ಯಕ್ಕೆ ಅಡಿಪಾಯವಾಗಿದೆ ಎಂದು ಡಾ. ಕಬಾಡಿಸ್ ಶ್ರೀ ಸಾಯಿ ಹನುಮಾನ್ ಫೌಂಡೇಶನ್ ಮತ್ತು ಚಾರಿಟೇಬಲ್ ಟ್ರಸ್ಟ್ (ರಿ.) ಅಧ್ಯಕ್ಷ ಡಾ. ಪಾಂಡುರಂಗಸಾ ಹ. ಕಬಾಡಿ ಹೇಳಿದರು.

ನಗರದ ಕಳಸಾಪುರ ರಸ್ತೆಯ ಶ್ರೀ ಸಾಯಿ ಬಾಪೂಜಿ ನಗರದಲ್ಲಿರುವ ಶ್ರೀ ಸಾಯಿ ಹನುಮಾನ್ ಆರೋಗ್ಯ ದಾಸೋಹ ಕೇಂದ್ರದಲ್ಲಿ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಉಚಿತ ಮಕ್ಕಳ ಆರೋಗ್ಯ ತಪಾಸಣೆ ಹಾಗೂ ಚಿಕಿತ್ಸಾ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಅನ್ನದಿಂದ ಆರೋಗ್ಯ, ಆರೋಗ್ಯದಿಂದ ಶಿಕ್ಷಣ, ಶಿಕ್ಷಣದಿಂದ ಜ್ಞಾನ ಹಾಗೂ ಆ ಜ್ಞಾನದ ಮೂಲಕ ದೇಶಸೇವೆ ಎಂಬ ಪಂಚದಾಸೋಹದ ಆಶಯವನ್ನು ಟ್ರಸ್ಟ್ ಹೊಂದಿದ್ದು, ಅದನ್ನು ಸಾಕಾರಗೊಳಿಸಲು ಸಮಾಜದ ಸಹಕಾರ ಅಗತ್ಯವಾಗಿದೆ ಎಂದು ತಿಳಿಸಿದರು.

ಶಿಬಿರದಲ್ಲಿ ಸುಮಾರು 75 ಮಕ್ಕಳ ಆರೋಗ್ಯ ತಪಾಸಣೆ ನಡೆಸಿ, ಅಗತ್ಯವಿರುವವರಿಗೆ ಉಚಿತ ಔಷಧಿಗಳನ್ನು ವಿತರಿಸಲಾಯಿತು. ಅಲ್ಲದೆ 51 ಅಪೌಷ್ಟಿಕ ಮಕ್ಕಳಿಗೆ ಪೂರಕ ಪೌಷ್ಟಿಕ ಆಹಾರ ನೀಡಲಾಯಿತು. ಮಕ್ಕಳ ತಜ್ಞ ಡಾ. ಈರಣ್ಣ ಹಳೆಮನಿ ಮಾತನಾಡಿ, ಮಕ್ಕಳ ಆರೋಗ್ಯದಲ್ಲಿನ ನ್ಯೂನತೆಗಳನ್ನು ಆರಂಭದಲ್ಲಿಯೇ ಪತ್ತೆಹಚ್ಚಿದರೆ ಪರಿಣಾಮಕಾರಿ ಚಿಕಿತ್ಸೆ ನೀಡಲು ಸಾಧ್ಯವಾಗುತ್ತದೆ ಎಂದರು. ಅತಿಥಿಯಾಗಿ ಭಾಗವಹಿಸಿದ್ದ ಕಲಾವತಿ ಆನಂದ ಅಲ್ಲೂರ, ಮಕ್ಕಳಿಗೆ ಮನೆಯಲ್ಲೇ ತಯಾರಿಸಿದ ಪೌಷ್ಟಿಕ ಆಹಾರವನ್ನೇ ನೀಡಬೇಕು. ಹೊರಗಿನ ಜಂಕ್ ಫುಡ್ ಹಾಗೂ ಪ್ಯಾಕೆಟ್ ಆಹಾರಗಳಿಂದ ಸಾಧ್ಯವಾದಷ್ಟು ದೂರವಿಡಬೇಕು

> ಅನ್ನದಿಂದ ಆರೋಗ್ಯ, ಆರೋಗ್ಯದಿಂದ ಶಿಕ್ಷಣ, ಶಿಕ್ಷಣದಿಂದ ಜ್ಞಾನ ಮತ್ತು ಜ್ಞಾನದಿಂದ ದೇಶಸೇವೆ ಎಂಬುದು ನಮ್ಮ ಪಂಚದಾಸೋಹದ ಪರಿಕಲ್ಪನೆ.
> **- ಡಾ. ಪಾಂಡುರಂಗಸಾ ಹ. ಕಬಾಡಿ**


ಎಂದು ಪೋಷಕರಿಗೆ ಸಲಹೆ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಎಸ್ ಎಸ್‌ಕೆ ಪಂಚ್ ಟ್ರಸ್ಟ್ ಕಮಿಟಿ ಅಧ್ಯಕ್ಷ ಫಕ್ಕೀರಸಾ ಬಾಬಾಸಾ ಭಾಂಡಗೆ ಮಾತನಾಡಿದರು.

ವೇದಿಕೆಯಲ್ಲಿ ರತ್ನಾ ಬಸಪ್ಪ ಯಳಮಲಿ ಹಾಗೂ ದುರ್ಗೇಶ್ ವಿಭೂತಿ ಉಪಸ್ಥಿತರಿದ್ದರು.

ಫಾರ್ಮಸಿಸ್ಟ್ ದೀಪಕ್ ಖಟವಟೆ ವೈದ್ಯರು ಸೂಚಿಸಿದ ಔಷಧಿಗಳನ್ನು ಮಕ್ಕಳಿಗೆ ವಿತರಿಸಿದರು. ಡಾ. ದಯಾನಂದ ಕಬಾಡಿ, ಡಾ. ಸೂರಜ್ ಕಾಟಿಗೇರ ಹಾಗೂ ಲ್ಯಾಬ್ ಟೆಕ್ನಿಷಿಯನ್ ಪ್ರಕಾಶ್ ಬಿದರಿ ಶಿಬಿರದಲ್ಲಿ ಸೇವೆ ಸಲ್ಲಿಸಿದರು. ಅನ್ನಪೂರ್ಣಾ ಹಬೀಬ್, ಅಂಗನವಾಡಿ ಕಾರ್ಯಕರ್ತೆಯರಾದ ರಮೀಜಾ ಸೋಲಾಪುರ, ದೀಪಾ ವಿಭೂತಿ, ವೀಣಾ ಗಣಚಾರ ಹಾಗೂ ಆಶಾ ಕಾರ್ಯಕರ್ತೆ ಭಾರತಿ ಬಾರಕೇರ ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸಿದರು. ಟ್ರಸ್ಟ್‌ನ ಟ್ರಸ್ಟಿ ಸ್ನೇಹಲತಾ ಕಬಾಡಿ ಮನೆಯಲ್ಲಿಯೇ ಪೌಷ್ಟಿಕ ಆಹಾರ ತಯಾರಿಸುವ ಕುರಿತು ಮಾಹಿತಿ ನೀಡಿ, ಕಾರ್ಯಕ್ರಮಕ್ಕೆ ಸಹಕರಿಸಿದ ವೈದ್ಯರು, ಅತಿಥಿಗಳು, ಸಿಬ್ಬಂದಿ, ತಾಯಂದಿರು ಹಾಗೂ ಮಕ್ಕಳಿಗೆ ಕೃತಜ್ಞತೆ ಸಲ್ಲಿಸಿದರು.

---

## ಅಂಗನವಾಡಿಗಳಲ್ಲಿ ಗುಣಮಟ್ಟದ ಶಿಕ್ಷಣಕ್ಕೆ ಒತ್ತು



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯ ಅಂಗನವಾಡಿ ಕೇಂದ್ರಗಳಲ್ಲಿ ಶಾಲಾಪೂರ್ವ ಶಿಕ್ಷಣದ ಗುಣಮಟ್ಟವನ್ನು ಮತ್ತಷ್ಟು ಹೆಚ್ಚಿಸುವ ಉದ್ದೇಶದಿಂದ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಎಚ್‌ಡಿಎಫ್‌ಸಿ ಲೈಫ್ (ಮುಂಬೈ) ಹಾಗೂ ಕಲಿಕೆಟಾಟಾ ಟ್ರಸ್ಟ್‌ನ (ಬೆಂಗಳೂರು) ಸಹಯೋಗದಲ್ಲಿ ನಾಲ್ಕು ವರ್ಷಗಳ ಅವಧಿಯ ಮಹತ್ವದ ಒಡಂಬಡಿಕೆಗೆ ಸಹಿ ಹಾಕಲಾಗಿದೆ.

2026-27ನೇ ಸಾಲಿನಿಂದ ಜಿಲ್ಲೆಯ ಐದು ಶಿಶು ಅಭಿವೃದ್ಧಿ ಯೋಜನೆಗಳ ವ್ಯಾಪ್ತಿಯ 1,248 ಅಂಗನವಾಡಿ ಕೇಂದ್ರಗಳಲ್ಲಿ ಶಾಲಾಪೂರ್ವ ಶಿಕ್ಷಣ ಬಲವರ್ಧನೆ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುವುದು.

ಕಾರ್ಯಕ್ರಮದಲ್ಲಿ ಮಾತನಾಡಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ರಾಧಾ ಜಿ. ಮಣ್ಣೂರ, ಶಾಲಾಪೂರ್ವ ಶಿಕ್ಷಣದ ಗುಣಮಟ್ಟ ಹೆಚ್ಚಿಸುವ ನಿಟ್ಟಿನಲ್ಲಿ ಈ ಯೋಜನೆ ಮಹತ್ವದ ಹೆಜ್ಜೆಯಾಗಿದ್ದು, ಮಕ್ಕಳ ಕಲಿಕಾ ಸಾಮರ್ಥ್ಯ ವೃದ್ಧಿಗೆ ಸಹಕಾರಿಯಾಗಲಿದೆ ಎಂದು ತಿಳಿಸಿದರು. ಶಿವಕುಮಾರ ಡಿ. ಅವರು ಕಾರ್ಯಕ್ರಮದ ರೂಪರೇಷೆ ಕುರಿತು ವಿವರಿಸಿದರೆ, ಎಚ್‌ಡಿಎಫ್‌ಸಿ ಲೈಫ್‌ನ ಎಸ್‌ವಿಪಿ (ಮಾರ್ಕೆಟಿಂಗ್‌ಸಿಎಸ್‌ಆರ್) ರೀನಾ ಭಾತಿರ್ ಯೋಜನೆಗೆ ಅಗತ್ಯವಿರುವ ಅನುದಾನ ಹಾಗೂ ಅನುಷ್ಠಾನದ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಸಿಇಒ ಸಿ.ಎನ್. ಶ್ರೀಧರ್, ರೀಜಿನಲ್ ಹೆಡ್ ಸೂರಜ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ಮಹಾಂತಸ್ವಾಮಿ ಪೂಜಾರ, ಕಲಿಕೆಟಾಟಾ ಟ್ರಸ್ಟ್‌ನ ಇಸಿಸಿಇ ಕಾರ್ಯಕ್ರಮ ಅಧಿಕಾರಿ ಕೊಟ್ರೇಶ್ ಎ.ವೈ., ಜಿಲ್ಲಾ ವ್ಯವಸ್ಥಾಪಕ ಅಶೋಕ, ಜಿಲ್ಲೆಯ ಎಲ್ಲಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಮೇಲ್ವಿಚಾರಕಿಯರು ಹಾಗೂ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

---

ಬಿ.ಜಿ. ಅಣ್ಣಿಗೇರಿ ಗುರುಗಳ 96ನೇ ಜಯಂತಿಯಲ್ಲಿ ತೋಂಟದ ಶ್ರೀ

## ಅಂಕಗಳ ಜತೆಗೆ ಕೌಶಲ್ಯವೂ ಯಶಸ್ಸಿನ ಮೆಟ್ಟಿಲು




**ವಿಜಯಸಾಕ್ಷಿ ಸುದ್ದಿ, ಗದಗ**

ಸಮಾಜಕ್ಕಾಗಿ ಬದುಕಿದವರನ್ನೇ ಇತಿಹಾಸ ಸ್ಮರಿಸುತ್ತದೆ. ತ್ಯಾಗವೇ ಮನುಷ್ಯನಿಗೆ ಅಮರತ್ವ ತಂದುಕೊಡುತ್ತದೆ. ಶಿಕ್ಷಣ ಸೇವೆ, ಸಮಾಜಮುಖಿ ಬದುಕು ಹಾಗೂ ಕೌಶಲ್ಯಾಧಾರಿತ ಶಿಕ್ಷಣವೇ ಯುವಜನರ ಭವಿಷ್ಯ ರೂಪಿಸುವ ಶಕ್ತಿಗಳಾಗಿದ್ದು, ವಿದ್ಯಾರ್ಥಿಗಳು ಅಂಕಗಳ ಜೊತೆಗೆ ಕೌಶಲ್ಯವನ್ನೂ ಬೆಳೆಸಿಕೊಳ್ಳಬೇಕು ಎಂದು ಗದಗ ತೋಂಟದಾರ್ಯ ಮಠದ ಪೂಜ್ಯ ಜ.ಡಾ. ತೋಂಟದ ಸಿದ್ದರಾಮ ಮಹಾಸ್ವಾಮೀಜಿ ಹೇಳಿದರು.

ನಗರದ ಶ್ರೀ ಬಿ.ಜಿ. ಅಣ್ಣಿಗೇರಿ ಗುರುಗಳ ಆಶ್ರಮದಲ್ಲಿ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದಿಂದ ಆಯೋಜಿಸಿದ್ದ 96ನೇ ಜಯಂತ್ಯುತ್ಸವ ಹಾಗೂ 12ನೇ ವರ್ಷದ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಬಡ ಮಕ್ಕಳ ಶಿಕ್ಷಣ ಹಾಗೂ ಸಮಾಜಸೇವೆಗೆ ತಮ್ಮ ಸಂಪೂರ್ಣ ಬದುಕನ್ನೇ ಸಮರ್ಪಿಸಿದ್ದ ಅಪರೂಪದ ತ್ಯಾಗಜೀವಿ ಬಿ.ಜಿ. ಅಣ್ಣಿಗೇರಿ ಗುರುಗಳು ತಮ್ಮ ವೇತನ ಹಾಗೂ ನಿವೃತ್ತಿಯ ನಂತರದ ಪಿಂಚಣಿಯನ್ನೂ ವಿದ್ಯಾರ್ಥಿಗಳ ಶಿಕ್ಷಣಕ್ಕಾಗಿ ವಿನಿಯೋಗಿಸಿದ್ದು, ಅವರ ಆದರ್ಶ ಇಂದಿಗೂ ಆಶ್ರಮದ ಸೇವಾಕಾರ್ಯಗಳಲ್ಲಿ ಜೀವಂತವಾಗಿದೆ ಎಂದು ಹೇಳಿದರು.

ಆಶ್ರಮವು ಉಚಿತ ಶಿಕ್ಷಣ, ಮಾರ್ಗದರ್ಶನ ಹಾಗೂ ವ್ಯಕ್ತಿತ್ವ ವಿಕಾಸದ ಮೂಲಕ ನೂರಾರು ವಿದ್ಯಾರ್ಥಿಗಳ ಬದುಕಿಗೆ ಬೆಳಕಾಗುತ್ತಿದೆ. ಯಾವುದೇ ಪ್ರತಿಫಲದ ನಿರೀಕ್ಷೆಯಿಲ್ಲದೆ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿಯ ಕಾರ್ಯವೂ

> ವಿದ್ಯಾರ್ಥಿಗಳು ಕೇವಲ ಅಂಕಗಳ ಬೆನ್ನಟ್ಟದೇ, ಜ್ಞಾನ, ಕೌಶಲ್ಯ ಮತ್ತು ವ್ಯಕ್ತಿತ್ವವನ್ನು ಬೆಳೆಸಿಕೊಂಡಾಗ ಮಾತ್ರ ಬದುಕಿನಲ್ಲಿ ಯಶಸ್ಸು ಸಾಧಿಸಲು ಸಾಧ್ಯ.
> **- ಜ.ಡಾ. ತೋಂಟದ ಸಿದ್ದರಾಮ ಮಹಾಸ್ವಾಮೀಜಿ**

ಶ್ಲಾಘನೀಯವಾಗಿದೆ ಎಂದರು.

ಮುಖ್ಯ ಅತಿಥಿಯಾಗಿ ಮಾತನಾಡಿದ ಕೃಷ್ಣೇಗೌಡ ಪಾಟೀಲ, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ಕೇವಲ ಅಂಕಗಳಿಂದಲ್ಲ, ತಮ್ಮ ಕೌಶಲ್ಯದಿಂದ ಗುರುತಿಸಿಕೊಳ್ಳಬೇಕು. ಹೈಸ್ಕೂಲ್ ಹಂತವೇ ಭವಿಷ್ಯದ ಭದ್ರ ಅಡಿಪಾಯವಾಗಿದ್ದು, ಶಿಸ್ತು, ಪರಿಶ್ರಮ ಹಾಗೂ ಸ್ಪಷ್ಟ ಗುರಿಯೊಂದಿಗೆ ಅಧ್ಯಯನ ಮಾಡಬೇಕು ಎಂದರು.

ಡಿಗ್ರಿಗಿಂತ ಕೌಶಲ್ಯಕ್ಕೆ ಹೆಚ್ಚು ಮಹತ್ವ ದೊರೆಯುತ್ತಿರುವ ಇಂದಿನ ಪರಿಸ್ಥಿತಿಯಲ್ಲಿ ಸಮಸ್ಯೆ ಪರಿಹಾರ ಸಾಮರ್ಥ್ಯ, ತಾಂತ್ರಿಕ ಜ್ಞಾನ ಹಾಗೂ ಹೊಸ ಕೌಶಲ್ಯಗಳನ್ನು ನಿರಂತರವಾಗಿ ಕಲಿಯುವುದು ಅಗತ್ಯವಾಗಿದೆ ಎಂದು ತಿಳಿಸಿದರು. ಐಸ್ ಕ್ಯೂಬ್ ಥಿಯರಿ ಉದಾಹರಿಸಿ, ಯಶಸ್ಸಿನ ಹಿಂದೆ ನಿರಂತರ ಪರಿಶ್ರಮ ಅಡಗಿರುತ್ತದೆ ಎಂದು ಹೇಳಿದರು.

ಆಶ್ರಮದಲ್ಲಿ ಶಿಕ್ಷಣ ಪಡೆದ ವಿದ್ಯಾರ್ಥಿಗಳಿಗೆ ಜೆ.ಎನ್.ಟಿ.ಟಿ.ಎಫ್. ಸಂಸ್ಥೆಯಲ್ಲಿ ಪ್ರವೇಶ ಪಡೆಯಲು ಅಗತ್ಯ ಸಹಕಾರ ನೀಡುವುದಾಗಿ ಭರವಸೆ ನೀಡಿದ ಅವರು, ಆಶ್ರಮದ ಅಭಿವೃದ್ಧಿ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಲು ಪ್ರಯತ್ನಿಸುವುದಾಗಿ ತಿಳಿಸಿದರು.

ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಪಾಟೀಲ ಮಾತನಾಡಿ, ಕಳೆದ 12 ವರ್ಷಗಳಿಂದ ಪ್ರತಿಭಾ ಪುರಸ್ಕಾರ ನೀಡಲಾಗುತ್ತಿದ್ದು, ಕಳೆದ ನಾಲ್ಕು ವರ್ಷಗಳಿಂದ ಗ್ರಾಮೀಣ ಪ್ರದೇಶದ ಶಾಲೆಗಳಲ್ಲಿಯೇ ನಗದು ಬಹುಮಾನ, ಪ್ರಮಾಣಪತ್ರ ಹಾಗೂ ಕಾಲೇಜು ಬ್ಯಾಗ್‌ನೊಂದಿಗೆ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗೌರವಿಸಲಾಗುತ್ತಿದೆ ಎಂದರು.

ಆಶ್ರಮದಲ್ಲಿ ಟ್ಯೂಷನ್ ಪಡೆದ 70 ಪ್ರತಿಭಾವಂತ ವಿದ್ಯಾರ್ಥಿಗಳಿಗೂ ಪುರಸ್ಕಾರ ನೀಡಲಾಗಿದೆ. ಬೇಸಿಗೆ ರಜೆಯಲ್ಲಿ 8, 9 ಹಾಗೂ 10ನೇ ತರಗತಿಯ ಸುಮಾರು 700ರಿಂದ 800 ವಿದ್ಯಾರ್ಥಿಗಳಿಗೆ 12 ಶಿಕ್ಷಕರು ಉಚಿತ ಬೋಧನೆ ಮಾಡುತ್ತಿದ್ದಾರೆ. ಕಲಿಕೆಗೆ ಅತ್ಯಾಧುನಿಕ ಎರಡು ಡಿಜಿಟಲ್ ಬೋರ್ಡ್‌ಗಳನ್ನು ದಾನಿಗಳು ನೀಡಿದ್ದಾರೆ. ತೋಂಟದಾರ್ಯ ಶಿಕ್ಷಣ ಸಮಿತಿಯಲ್ಲಿ 10 ಬಡ ವಿದ್ಯಾರ್ಥಿಗಳಿಗೆ ಉಚಿತ ಶಿಕ್ಷಣ ನೀಡಲಾಗುತ್ತಿದ್ದು, ದಾನಿಗಳು ಹಾಗೂ ಹಳೆ ವಿದ್ಯಾರ್ಥಿಗಳ ಸಹಕಾರದಿಂದ ಆಶ್ರಮದ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿವೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಗೋಪಾಲ ಅಗರವಾಲ್, ಲಕ್ಷ್ಮಣ ಜೋಗದಂಡಕರ, ಸಂತೋಷ ಪುಣೇಕರ, ನೇಹಾ ಖಟವಟೆ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಆಂಜನೇಯ ಕಟಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಂಜುಳಾ ತುಮ್ಮರಮಟ್ಟಿ ನಿರೂಪಿಸಿದರು. ಶಿವಪ್ಪ ಕತ್ತಿ ವಂದಿಸಿದರು. ಪ್ರತಿಷ್ಠಾನದ ಪದಾಧಿಕಾರಿಗಳು, ಸದಸ್ಯರು, ಪಾಲಕರು, ಗಣ್ಯರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

---

ಎಸ್‌ಐಆರ್ ಮಹಾ ಅಭಿಯಾನಕ್ಕೆ ಲಿಂಗರಾಜಗೌಡ ಪಾಟೀಲ, ಡಾ. ಚಂದ್ರು ಲಮಾಣಿ ಚಾಲನೆ

## ಬೂತ್ ಬಲವರ್ಧನೆಗೆ ಬಿಜೆಪಿ ಒತ್ತು



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಭಾರತೀಯ ಜನತಾ ಪಕ್ಷದ ಸಂಘಟನೆಯನ್ನು ತಳಮಟ್ಟದಲ್ಲಿ ಮತ್ತಷ್ಟು ಸದೃಢಗೊಳಿಸುವ ಹಾಗೂ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ (ಎಸ್‌ಐಆರ್) ಕಾರ್ಯವನ್ನು ಯಶಸ್ವಿಗೊಳಿಸುವ ಉದ್ದೇಶದಿಂದ ಲಕ್ಷ್ಮೇಶ್ವರ ತಾಲೂಕಿನ ರಾಮಗೇರಿ ಗ್ರಾಮದಲ್ಲಿ ಭಾನುವಾರ ಬಿಜೆಪಿ ಬೂತ್ ಮಟ್ಟದ ಕಾರ್ಯಾಲಯ ಉದ್ಘಾಟನೆ ಹಾಗೂ ಎಸ್‌ಐಆರ್ ಫಾರ್ಮ್ ಭರ್ತಿ ಮಹಾ ಅಭಿಯಾನ ನಡೆಯಿತು.

ಬಿಜೆಪಿ ರಾಜ್ಯ ಶಿಸ್ತು ಸಮಿತಿ ಅಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ಲಿಂಗರಾಜಗೌಡ ಪಾಟೀಲ ಬೂತ್ ಕಾರ್ಯಾಲಯವನ್ನು ಉದ್ಘಾಟಿಸಿ ಮಾತನಾಡಿ, ಭಾರತೀಯ ಜನತಾ ಪಕ್ಷದ ಶಕ್ತಿ ಕಾರ್ಯಕರ್ತರು ಹಾಗೂ ಬೂತ್ ಮಟ್ಟದ ಸಂಘಟನೆಯಲ್ಲಿದೆ. ಪ್ರತಿಯೊಂದು ಬೂತ್‌ನಲ್ಲಿ ಸಂಘಟನೆ ಸಕ್ರಿಯವಾಗಿದ್ದರೆ ಪಕ್ಷದ ಚಟುವಟಿಕೆಗಳು ಪರಿಣಾಮಕಾರಿಯಾಗಿ ಜನರನ್ನು ತಲುಪಲಿವೆ. ಬೂತ್ ಕಾರ್ಯಾಲಯಗಳು ಕೇವಲ ಚುನಾವಣಾ ಸಂದರ್ಭದಲ್ಲಿ ಮಾತ್ರ ಸೀಮಿತವಾಗದೆ, ವರ್ಷಪೂರ್ತಿ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಸೇವಾ ಕೇಂದ್ರಗಳಾಗಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಬಳಿಕ ಶಿರಹಟ್ಟಿ ಕ್ಷೇತ್ರದ ಶಾಸಕ ಡಾ. ಚಂದ್ರು ಲಮಾಣಿ ಎಸ್‌ಐಆರ್ ಜಾಗೃತಿ ಮಹಾ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾರರ ಪಾತ್ರ ಅತ್ಯಂತ ಮಹತ್ವದ್ದಾಗಿದೆ.

ಅರ್ಹ ಮತದಾರರೆಲ್ಲರೂ ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಸರಿಯಾಗಿ ದಾಖಲಾಗಿದೆಯೇ ಎಂಬುದನ್ನು ಪರಿಶೀಲಿಸಿ, ಅಗತ್ಯವಿದ್ದಲ್ಲಿ ಎಸ್‌ಐಆರ್ ಫಾರ್ಮ್ ಭರ್ತಿ ಮಾಡಬೇಕು. ಮನೆಗಳಲ್ಲಿ ಫಾರ್ಮ್ ಭರ್ತಿ ಮಾಡಲು ಸಾಧ್ಯವಾಗದ ಹಿರಿಯ ನಾಗರಿಕರು

> ಬೂತ್ ಮಟ್ಟದ ಸಂಘಟನೆಯೇ ಪಕ್ಷದ ಶಕ್ತಿ. ಮತದಾರರ ಪಟ್ಟಿಯ ಪರಿಷ್ಕರಣೆ ಯಶಸ್ವಿಯಾಗಲು ಸಾರ್ವಜನಿಕರ ಸಹಕಾರ ಅತ್ಯಗತ್ಯ.
> **- ಲಿಂಗರಾಜಗೌಡ ಪಾಟೀಲ,** ವಿಧಾನ ಪರಿಷತ್ ಸದಸ್ಯ

ಹಾಗೂ ಶಿಕ್ಷಣ ಪಡೆದಿರದವರಿಗೆ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಸ್ಥಳದಲ್ಲಿಯೇ ನೆರವು ನೀಡಬೇಕು. ಯಾವುದೇ ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ಅಧಿಕಾರಿಗಳು ಹಾಗೂ ಸಾರ್ವಜನಿಕರು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಅಭಿಯಾನದ ಅಂಗವಾಗಿ ಮುಖಂಡರು ಹಾಗೂ ಕಾರ್ಯಕರ್ತರು ಗ್ರಾಮದ ವಿವಿಧ ಬೀದಿಗಳಲ್ಲಿ ಸಂಚರಿಸಿ ಮನೆ-ಮನೆಗೆ ಭೇಟಿ ನೀಡಿ ಎಸ್‌ಐಆರ್ ಫಾರ್ಮ್ ಭರ್ತಿ, ಮತದಾರರ ಪಟ್ಟಿಯ ಪರಿಷ್ಕರಣೆ, ಹೊಸ ಮತದಾರರ ಸೇರ್ಪಡೆ, ವಿವರಗಳ ತಿದ್ದುಪಡಿ ಹಾಗೂ ಅಗತ್ಯ ದಾಖಲೆಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಿದರು.

ಗ್ರಾಮಸ್ಥರು ಅಭಿಯಾನಕ್ಕೆ ಉತ್ತಮ ಸ್ಪಂದನೆ ವ್ಯಕ್ತಪಡಿಸಿ, ಮತದಾರರ ಪಟ್ಟಿಯನ್ನು ಸಮರ್ಪಕಗೊಳಿಸುವ ಕಾರ್ಯಕ್ಕೆ ಸಂಪೂರ್ಣ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಗಂಗಾಧರ ಮೆಣಸಿನಕಾಯಿ, ಮಹೇಂದ್ರ ಬೆಟಗೇರಿ, ಸಂತೋಷ ಲಮಾಣಿ, ಭೀಮಣ್ಣ ಯಂಗಾಡಿ, ದುಂಡೇಶ ಲಮಾಣಿ, ಶಂಕರ ಪೂಜಾರ, ಚನ್ನಬಸಪ್ಪ ಬೆಟಸೂರ, ಚಿದಾನಂದ ಮಲ್ಲೂರ, ರಮೇಶ ಬೆಳ್ಳಿಗಟ್ಟಿ, ಕೃಷ್ಣ ಪೂಜಾರ, ಪ್ರದೀಪ ಪಾಟೀಲ, ಬೀರಪ್ಪ ಕೆರೂರ ಸೇರಿದಂತೆ ಬಿಜೆಪಿ ಮುಖಂಡರು, ಪದಾಧಿಕಾರಿಗಳು, ಬೂತ್ ಅಧ್ಯಕ್ಷರು, ಕಾರ್ಯಕರ್ತರು, ಬಿಎಲ್‌ಒಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿಗಳು

### ಮೈಲಾರಪ್ಪ ಮೆಣಸಗಿ ಪಿಯು ಕಾಲೇಜಿನ ಫ್ರೆಶರ್ಸ್ ಪಾರ್ಟಿಯಲ್ಲಿ ಗುರುದೇವ ಬಾಳುಂಡಗಿ

# ಕನಸುಗಳಿಗೆ ಶಿಸ್ತೇ ಯಶಸ್ಸಿನ ಮೆಟ್ಟಿಲು



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಇನ್‌ಸೈಟ್ ಅಕಾಡೆಮಿ ನೇತೃತ್ವದಲ್ಲಿ ಕಾರ್ಯನಿರ್ವಹಿಸುತ್ತಿರುವ ಶ್ರೀ ಮೈಲಾರಪ್ಪ ಮೆಣಸಗಿ ಪದವಿಪೂರ್ವ ಕಾಲೇಜಿನ 2026-27ನೇ ಶೈಕ್ಷಣಿಕ ಸಾಲಿನ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭ ಫ್ರೆಶರ್ಸ್ ಪಾರ್ಟಿ ಎಂ.ಜಿ.ಆರ್.ಡಿ.ಪಿ.ಆರ್. ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಸಂಭ್ರಮದಿಂದ ನಡೆಯಿತು.

ಕಾರ್ಯಕ್ರಮವನ್ನು ವಿಡಿಯೊ ಕಾನ್ಫರೆನ್ಸ್ ಮೂಲಕ ಉದ್ಘಾಟಿಸಿ ಮಾತನಾಡಿದ ಎಂ.ಜಿ.ಆರ್.ಡಿ.ಪಿ.ಆರ್. ವಿಶ್ವವಿದ್ಯಾಲಯದ ಕುಲಪತಿ ಡಾ. ಸುರೇಶ್ ವಿ. ನಾಡಗೌಡ, ಪರಿಶ್ರಮ ಎನ್ನುವುದು ಒಂದು ದಿನದ ಸಾಧನೆಯಲ್ಲ. ನಿರಂತರ ಅಭ್ಯಾಸ, ಶ್ರದ್ಧೆ ಮತ್ತು ದೃಢ ಸಂಕಲ್ಪದಿಂದ ಮಾತ್ರ ವಿದ್ಯಾರ್ಥಿಗಳು ಜೀವನದಲ್ಲಿ ಉನ್ನತ ಸಾಧನೆ ಮಾಡಲು ಸಾಧ್ಯ ಎಂದು ಹೇಳಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ರಾಜ್ಯಮಟ್ಟದ ಸಂಪನ್ಮೂಲ ವ್ಯಕ್ತಿ ಗುರುದೇವ ಬಾಳುಂಡಗಿ, ವಿದ್ಯಾರ್ಥಿಗಳು ತಮ್ಮ ಕನಸುಗಳನ್ನು ನನಸಾಗಿಸಿಕೊಳ್ಳಬೇಕಾದರೆ ಜೀವನದಲ್ಲಿ ಶಿಸ್ತು, ಸಮಯಪ್ರಜ್ಞೆ ಹಾಗೂ ಉತ್ತಮ ಮೌಲ್ಯಗಳನ್ನು ಅಳವಡಿಸಿಕೊಂಡು ಗುರಿಯತ್ತ ನಿರಂತರವಾಗಿ ಸಾಗಬೇಕು ಎಂದು ಕಿವಿಮಾತು ಹೇಳಿದರು.

ಈ ಸಂದರ್ಭದಲ್ಲಿ 2025-26ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಅತ್ಯುತ್ತಮ ಅಂಕ ಗಳಿಸಿದ ಟಾಪರ್ ವಿದ್ಯಾರ್ಥಿಗಳು ಹಾಗೂ ನೀಟ್ ಪರೀಕ್ಷೆಯಲ್ಲಿ ಸಾಧನೆಗೈದ ವಿನಯ ಅರಶಿನದ ಮತ್ತು ಅನುಷಾ ನವಲಗುಂದ ಅವರನ್ನು ಕಾಲೇಜಿನ ಆಡಳಿತ ಮಂಡಳಿ ಹಾಗೂ ಗಣ್ಯರು ಸನ್ಮಾನಿಸಿ ಅಭಿನಂದಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಂಶುಪಾಲ ವಸಿಂರಾಜ ದೊಡ್ಡಮನಿ ವಹಿಸಿದ್ದರು.

ವೇದಿಕೆಯಲ್ಲಿ ಎಂ.ಎಂ.ಎಂ. ಟ್ರಸ್ಟ್ ಕಾರ್ಯಾಧ್ಯಕ್ಷ ಡಾ. ಜಯದೇವ ಮೆಣಸಗಿ, ಆಡಳಿತಾಧಿಕಾರಿ ಎನ್.ಎಂ. ಮುಲ್ಲಾ, ಆದಿಯೋಗಿ ಟ್ರಸ್ಟ್ ಅಧ್ಯಕ್ಷ ಎಸ್.ಜಿ. ಪಾಟೀಲ, ಕಾರ್ಯದರ್ಶಿ ಪವನಕುಮಾರ್ ಶೇಠ್, ಖಜಾಂಚಿ ಕುಮಾರ್ ಎಂ. ರಾಠೋಡ್ ಹಾಗೂ ವಿದ್ಯಾರ್ಥಿ ಒಕ್ಕೂಟದ ಪ್ರತಿನಿಧಿಗಳಾದ ನಿತಿನ್ ಪಪ್ಪಣ್ಣವರ, ದಿಶಾ ಹಬೀಬ್ ಮತ್ತು ಹರ್ಷಿತ್ ಎಂ.ಆರ್. ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಬೋಧಕ, ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಪೋಷಕರು ಭಾಗವಹಿಸಿದ್ದರು.

# ಇಂದು ಶರಣ ಸಾಹಿತ್ಯ ಪರಿಷತ್ತಿನ ದತ್ತಿ ಉಪನ್ಯಾಸ

**ವಿಜಯಸಾಕ್ಷಿ ಸುದ್ದಿ, ಗದಗ**



ಗದಗ ತಾಲೂಕ ಶರಣ ಸಾಹಿತ್ಯ ಪರಿಷತ್ತು ಹಾಗೂ ಗದಗ ತಾಲೂಕ ಕದಳಿ ಮಹಿಳಾ ವೇದಿಕೆಗಳ ಸಂಯುಕ್ತಾಶ್ರಯದಲ್ಲಿ ಲಿಂಗೈಕ್ಯ ಶರಣ ಬಸವರಾಜ ಅಯ್ಯಪ್ಪ ಅಂಗಡಿ ಅವರ ಹೆಸರಿನ ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಜುಲೈ 28ರಂದು ಮಧ್ಯಾಹ್ನ 2 ಗಂಟೆಗೆ ನಗರದ ಸಿದ್ಧಲಿಂಗನಗರದ ಡಿ.ಸಿ. ಪಾವಟೆ ಶಿಕ್ಷಣ ಮಹಾವಿದ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಹಾವಿದ್ಯಾಲಯದ ಪ್ರಾಂಶುಪಾಲ ಪ್ರೊ. ಎಸ್.ಪಿ. ಗೌಳಿ ವಹಿಸಲಿದ್ದಾರೆ.

ವಚನ ಸಂಶೋಧನೆ ಪಿತಾಮಹ ಡಾ. ಎಫ್.ಜಿ. ಹಳಕಟ್ಟಿ ಅವರ 146ನೇ ಜಯಂತಿ ಅಂಗವಾಗಿ, ನಿವೃತ್ತ ಪ್ರಾಂಶುಪಾಲರು ಹಾಗೂ ಶರಣತತ್ವ ಚಿಂತಕರಾದ ಶರಣ ಎನ್.ಎಂ. ಪವಾಡಿಗೌಡ್ರ ಅವರು ವಚನ ಸಾಹಿತ್ಯ ಸಂರಕ್ಷಣೆ ವಿಷಯದ ಕುರಿತು ದತ್ತಿ ಉಪನ್ಯಾಸ ನೀಡಲಿದ್ದಾರೆ.

ಅತಿಥಿಗಳಾಗಿ ಬಸವದಳದ ಅಧ್ಯಕ್ಷ ಶರಣ ವಿ.ಕೆ. ಕರೇಗೌಡ್ರ, ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಕಾರ್ಯದರ್ಶಿ ಶರಣ ಬೂದಪ್ಪ ಅಂಗಡಿ ಹಾಗೂ ದತ್ತಿ ದಾನಿ ಶರಣ ಸುರೇಶ್ ಬಿ. ಅಂಗಡಿ ಭಾಗವಹಿಸಲಿದ್ದಾರೆ.

ಶರಣ ಸಾಹಿತ್ಯ ಪರಿಷತ್ತಿನ ಸದಸ್ಯರು, ಕದಳಿ ಮಹಿಳಾ ವೇದಿಕೆಯ ಸದಸ್ಯರು, ಸಾಹಿತ್ಯಾಸಕ್ತರು ಹಾಗೂ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ತಾಲೂಕ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಪ್ರಕಾಶ ಅಸುಂಡಿ ಹಾಗೂ ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷೆ ಸುಲೋಚನಾ ಐಹೊಳ್ಳಿ ಪ್ರಕಟಣೆಯಲ್ಲಿ ಕೋರಿದ್ದಾರೆ.

# ಮನೋರಮಾ ಕಾಲೇಜಿನಲ್ಲಿ ಮೆಹಂದಿ ಕಲೆಯ ಸಂಭ್ರಮ

**ವಿಜಯಸಾಕ್ಷಿ ಸುದ್ದಿ, ಗದಗ**




ನಗರದ ಮನೋರಮಾ ಸ್ವತಂತ್ರ ಪದವಿಪೂರ್ವ ಕಾಲೇಜಿನಲ್ಲಿ ವಿದ್ಯಾರ್ಥಿನಿಯರ ಸೃಜನಶೀಲತೆಯನ್ನು ಅನಾವರಣಗೊಳಿಸುವ ಉದ್ದೇಶದಿಂದ ಮೆಹಂದಿ ಸ್ಪರ್ಧೆ ಆಯೋಜಿಸಲಾಗಿತ್ತು.

ಸ್ಪರ್ಧೆಯಲ್ಲಿ ಪಿಯುಸಿ ವಿದ್ಯಾರ್ಥಿನಿಯರು ಉತ್ಸಾಹದಿಂದ ಪಾಲ್ಗೊಂಡು, ತಮ್ಮ ಕೈಗಳ ಮೇಲೆ ವೈವಿಧ್ಯಮಯ ಹಾಗೂ ಆಕರ್ಷಕ ಮೆಹಂದಿ ವಿನ್ಯಾಸಗಳನ್ನು ಮೂಡಿಸುವ ಮೂಲಕ ಕಲಾತ್ಮಕ ಪ್ರತಿಭೆಯನ್ನು ಪ್ರದರ್ಶಿಸಿದರು. ವಿದ್ಯಾರ್ಥಿನಿಯರ ಸೃಜನಾತ್ಮಕ ಕೌಶಲ್ಯ ನೋಡುಗರ ಮೆಚ್ಚುಗೆಗೆ ಪಾತ್ರವಾಯಿತು. ಸ್ಪರ್ಧೆಯನ್ನು ವೀಕ್ಷಿಸಿದ ಪ್ರಾಂಶುಪಾಲರು ಹಾಗೂ ಉಪನ್ಯಾಸಕ ವೃಂದದವರು ವಿದ್ಯಾರ್ಥಿನಿಯರ ಪ್ರತಿಭೆಯನ್ನು ಶ್ಲಾಘಿಸಿರು. ಪಿಯುಸಿ ಸಂಯೋಜಕಿ ಶಾಹೀದಾ ಶಿರಹಟ್ಟಿ ಮಾತನಾಡಿ, ಪಠ್ಯದ ಜೊತೆಗೆ ಸಾಂಸ್ಕೃತಿಕ ಹಾಗೂ ಸೃಜನಾತ್ಮಕ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ವಿದ್ಯಾರ್ಥಿ ಜೀವನ ಮತ್ತಷ್ಟು ಅರ್ಥಪೂರ್ಣವಾಗುತ್ತದೆ ಎಂದು ತಿಳಿಸಿದರು. ಸ್ಪರ್ಧೆಯಲ್ಲಿ ಭಾಗವಹಿಸಿದ ವಿದ್ಯಾರ್ಥಿನಿಯರಿಗೆ ಅವರು ಅಭಿನಂದನೆ ಸಲ್ಲಿಸಿ, ಸೂಕ್ತ ಸಲಹೆ-ಸೂಚನೆಗಳನ್ನು ನೀಡಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷ ಎನ್.ಎಂ. ಕುಡತರಕರ, ಕಾರ್ಯದರ್ಶಿ ಮಂಜುನಾಥ ಕುಡತರಕರ, ಪ್ರಾಂಶುಪಾಲ ಬಿ.ಎಸ್. ಹಿರೇಮಠ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ನಿರ್ದೇಶಕರಾದ ಸಂಜಯ ಕುಡತರಕರ ಹಾಗೂ ಚೇತನ ಕುಡತರಕರ ಸೇರಿದಂತೆ ಸಂಸ್ಥೆಯ ಸಿಬ್ಬಂದಿ ವರ್ಗದವರು ವಿದ್ಯಾರ್ಥಿನಿಯರನ್ನು ಅಭಿನಂದಿಸಿದರು

---

### ಎಎಸ್‌ಎಸ್ ಕಾಲೇಜಿನಲ್ಲಿ ವಿಕಸಿತ್ ಭಾರತ್ ನಶಾ ಮುಕ್ತ ಯುವ ಜಾಗೃತಿ ಕಾರ್ಯಕ್ರಮ

# ನಶಾ ಮುಕ್ತ ಯುವಕರೇ ಅಭಿವೃದ್ಧಿ ಹೊಂದಿದ ಭಾರತದ ಶಕ್ತಿ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಆದರ್ಶ ಶಿಕ್ಷಣ ಸಮಿತಿಯ ಸುವರ್ಣ ಮಹೋತ್ಸವ ಭವನದಲ್ಲಿ ಭಾರತ ಸರ್ಕಾರದ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯ, ಪ್ರಾದೇಶಿಕ ಎನ್‌ಎಸ್‌ಎಸ್ ನಿರ್ದೇಶನಾಲಯ (ಬೆಂಗಳೂರು), ಆದರ್ಶ ಶಿಕ್ಷಣ ಸಮಿತಿಯ ಪದವಿ ವಾಣಿಜ್ಯ ಮಹಾವಿದ್ಯಾಲಯದ ಎನ್‌ಎಸ್‌ಎಸ್ ಘಟಕ ಹಾಗೂ ಮೈ ಭಾರತ್ ಕೇಂದ್ರ, ಗದಗ ಸಹಯೋಗದಲ್ಲಿ ವಿಕಸಿತ್ ಭಾರತ್‌ನಶಾ ಮುಕ್ತ ಯುವ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಯಿತು.

ಆದರ್ಶ ಶಿಕ್ಷಣ ಸಮಿತಿಯ ಕಾರ್ಯದರ್ಶಿ ಎ.ಡಿ. ಗೊಡಖಿಂಡಿ ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಯುವ ಐಕಾನ್ ಆಗಿ ಭಾಗವಹಿಸಿದ್ದ ಭಾರತ ಸರ್ಕಾರದ ರಾಷ್ಟ್ರೀಯ ಯುವ ಐಕಾನ್ ವರುಣ್ ಡಿ. ಆರ್ಯ ಮಾತನಾಡಿ, ಇಂದಿನ ನಶಾ ಮುಕ್ತ ಯುವಕರೇ ನಾಳಿನ ಬಲಿಷ್ಠ ಭಾರತದ ಶಕ್ತಿ.

ದೇಶದ ಅಭಿವೃದ್ಧಿ, ಪ್ರಗತಿ ಹಾಗೂ ಸಮೃದ್ಧಿಯಲ್ಲಿ ಯುವಜನರ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಯುವಕರು ಮಾದಕ ವ್ಯಸನಗಳಿಂದ ದೂರವಿದ್ದು ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಮದ್ಯಪಾನ, ಧೂಮಪಾನ ಹಾಗೂ ವಿವಿಧ ಮಾದಕ ವಸ್ತುಗಳ ವ್ಯಸನವು ದೈಹಿಕ ಆರೋಗ್ಯದ ಜೊತೆಗೆ ಮಾನಸಿಕ ಸ್ಥಿರತೆ, ಶಿಕ್ಷಣ, ಉದ್ಯೋಗ ಮತ್ತು ಕುಟುಂಬದ ನೆಮ್ಮದಿಯ ಮೇಲೂ ದುಷ್ಪರಿಣಾಮ ಬೀರುತ್ತದೆ. ಕ್ರೀಡೆ, ಯೋಗ, ವ್ಯಾಯಾಮ, ಉತ್ತಮ ಹವ್ಯಾಸಗಳು ಹಾಗೂ ಸಾಮಾಜಿಕ ಸೇವೆಯಲ್ಲಿ ತೊಡಗಿಸಿಕೊಳ್ಳುವ ಮೂಲಕ ಯುವಕರು ವ್ಯಸನಗಳಿಂದ ದೂರವಿರಬಹುದು ಎಂದು ಅವರು ತಿಳಿಸಿದರು.

ನಶಾ ಮುಕ್ತ ಸಮಾಜ ನಿರ್ಮಾಣಕ್ಕೆ ಕುಟುಂಬ, ಶಾಲೆ, ಕಾಲೇಜು, ಸರ್ಕಾರ ಹಾಗೂ ಸಮಾಜದ ಎಲ್ಲರ ಸಹಕಾರ ಅಗತ್ಯವಾಗಿದೆ. ಪ್ರತಿಯೊಬ್ಬ ಯುವಕ-ಯುವತಿಯೂ ನಶಾ ಮುಕ್ತ ಯುವಬಲಿಷ್ಠ ಭಾರತ ಎಂಬ ಗುರಿಯನ್ನು ಜೀವನದ ಧ್ಯೇಯವನ್ನಾಗಿಸಿಕೊಳ್ಳಬೇಕು ಎಂದು ಅವರು ಹೇಳಿದರು.

> **ಇಂದಿನ ನಶಾ ಮುಕ್ತ ಯುವಕರೇ ನಾಳಿನ ಶಕ್ತಿಶಾಲಿ ಭಾರತದ ನಿರ್ಮಾತೃಗಳು. ಆರೋಗ್ಯವಂತ ಮತ್ತು ಜಾಗೃತ ಯುವಜನತೆಯೇ ಅಭಿವೃದ್ಧಿ ಹೊಂದಿದ ರಾಷ್ಟ್ರದ ನಿಜವಾದ ಶಕ್ತಿ.**
>
> **- ವರುಣ್ ಡಿ. ಆರ್ಯ,**
> ರಾಷ್ಟ್ರೀಯ ಯುವ ಐಕಾನ್

ಮೈ ಭಾರತ್ ಕೇಂದ್ರದ ಡೆಪ್ಯುಟಿ ಡೈರೆಕ್ಟರ್ ಲೋಕೇಶ್ ಕುಮಾರ್ ಅವರು ವಿದ್ಯಾರ್ಥಿಗಳಿಗೆ ನಶಾ ಮುಕ್ತ ಪ್ರತಿಜ್ಞಾ ವಿಧಿ ಬೋಧಿಸಿ, ವ್ಯಸನದ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸಿದರು.

ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ವಿ.ಟಿ. ನಾಯ್ಕರ್, ಯುವ ನಾಯಕ ಇಮಾಮ ಮೊರಬದ್, ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಪ್ರೊ. ಬಿ.ಪಿ. ಜೈನರ್, ವಿವಿಧ ಮಹಾವಿದ್ಯಾಲಯಗಳ ಶಿಕ್ಷಕರು, ಎನ್‌ಎಸ್‌ಎಸ್ ಸ್ವಯಂಸೇವಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

---

# ಗೋ ಆಧಾರಿತ ಕೃಷಿಯತ್ತ ರೈತರು ಹೆಜ್ಜೆಯಿಡಲಿ



**ವಿಜಯಸಾಕ್ಷಿ ಸುದ್ದಿ, ಗದಗ**

ರೈತರು ಆರೋಗ್ಯಕರ ಆಹಾರ ಉತ್ಪಾದನೆ ಹಾಗೂ ಸುಸ್ಥಿರ ಕೃಷಿ ಪದ್ಧತಿಯನ್ನು ಅಳವಡಿಸಿಕೊಳ್ಳುವ ಉದ್ದೇಶದಿಂದ ಇನ್ನರ್ ವೀಲ್ ಕ್ಲಬ್ ಗದಗ-ಬೆಟಗೇರಿ ವತಿಯಿಂದ ಗೋ ಆಧಾರಿತ ಕೃಷಿ ಕುರಿತು ವಿಶೇಷ ಅರಿವು ಕಾರ್ಯಕ್ರಮ ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ್ದ ಕೃಷಿ ತಜ್ಞ ರವಿ ಹಡಪದ ಅವರು ಗೋ ಆಧಾರಿತ ಕೃಷಿಯ ಮಹತ್ವ, ಅದರ ವೈಜ್ಞಾನಿಕ ಹಿನ್ನೆಲೆ ಹಾಗೂ ಪ್ರಾಯೋಗಿಕ ಅನುಷ್ಠಾನದ ಕುರಿತು ವಿವರಿಸಿದರು.

ಗೋಮಯ, ಗೋಮೂತ್ರ, ಪಂಚಗವ್ಯ, ಜೀವಾಮೃತ ಹಾಗೂ ಬೀಜಾಮೃತ ಸೇರಿದಂತೆ ನೈಸರ್ಗಿಕ ಉತ್ಪನ್ನಗಳ ಬಳಕೆಯಿಂದ ಮಣ್ಣಿನ ಫಲವತ್ತತೆ ಹೆಚ್ಚಿಸುವುದು, ಬೆಳೆಗಳ ಗುಣಮಟ್ಟ ಸುಧಾರಿಸುವುದು ಹಾಗೂ ಕೃಷಿ ವೆಚ್ಚವನ್ನು ಗಣನೀಯವಾಗಿ ಕಡಿಮೆ ಮಾಡಬಹುದು ಎಂದು ಅವರು ತಿಳಿಸಿದರು.

ರಾಸಾಯನಿಕ ಗೊಬ್ಬರ ಹಾಗೂ ಕೀಟನಾಶಕಗಳ ಅತಿಯಾದ ಬಳಕೆಯಿಂದ ಮಣ್ಣಿನ ಆರೋಗ್ಯ ಹದಗೆಡುತ್ತಿರುವ ಹಿನ್ನೆಲೆಯಲ್ಲಿ, ಗೋ ಆಧಾರಿತ ನೈಸರ್ಗಿಕ ಕೃಷಿಯು ಪರಿಸರ ಸಂರಕ್ಷಣೆ ಮತ್ತು ಮಾನವ ಆರೋಗ್ಯದ ದೃಷ್ಟಿಯಿಂದ ಅತ್ಯಂತ ಮಹತ್ವದ್ದಾಗಿದೆ. ಸ್ಥಳೀಯ ಸಂಪನ್ಮೂಲಗಳನ್ನು ಸಮರ್ಪಕವಾಗಿ ಬಳಸಿಕೊಂಡು ರೈತರು ಸ್ವಾವಲಂಬಿ ಕೃಷಿಯತ್ತ ಹೆಜ್ಜೆಯಿಡಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಇನ್ನರ್ ವೀಲ್ ಕ್ಲಬ್ ಗದಗ-ಬೆಟಗೇರಿಯ ಅಧ್ಯಕ್ಷೆ ಮಂಜುಳಾ ಅಕ್ಕಿ ವಹಿಸಿದ್ದರು. ಕಾರ್ಯದರ್ಶಿ ಪೂಜಾ ಭೂಮಾ ಕಾರ್ಯಕ್ರಮ ನಿರ್ವಹಿಸಿದರು. ಪ್ರೇಮಾ ಗುಳಗೌಡ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಅತಿಥಿಯಾಗಿ ಭಾಗವಹಿಸಿದ್ದ ಲಲಿತಾ ಇಂಗಳಹಳ್ಳಿ ಅವರು ಎಸ್. ಜಾನಕಿ ಅವರ ಸ್ಮರಣಾರ್ಥ ಗಾಯನವನ್ನು ಪ್ರಸ್ತುತಪಡಿಸಿದರು. ಇದೇ ಸಂದರ್ಭದಲ್ಲಿ ನಾರಿ ಸಮ್ಮಾನ್ ಪ್ರಶಸ್ತಿ ಪುರಸ್ಕೃತೆ ಸುವರ್ಣಾ ಮದ್ರಿಮಠ ಅವರನ್ನು ಇನ್ನರ್ ವೀಲ್ ಕ್ಲಬ್ ವತಿಯಿಂದ ಸತ್ಕರಿಸಲಾಯಿತು.

ಕಾರ್ಯಕ್ರಮದಲ್ಲಿ ಕ್ಲಬ್‌ನ ಪದಾಧಿಕಾರಿಗಳು, ಸದಸ್ಯೆಯರು ಹಾಗೂ ಆಹ್ವಾನಿತರು ಉಪಸ್ಥಿತರಿದ್ದರು.

# ಸರ್ಕಾರಿ ಶಾಲಾ ಮಕ್ಕಳಿಗೆ ಶೈಕ್ಷಣಿಕ ಕಿಟ್ ವಿತರಣೆ



**ವಿಜಯಸಾಕ್ಷಿ ಸುದ್ದಿ, ಗದಗ**

ದ್ವಾರಕಾಮಾಯಿ ಫೌಂಡೇಶನ್ ಹಾಗೂ ಅಮೃತಾ ಟೂಲ್ಸ್ ಆ್ಯಂಡ್ ಕ್ರಾಫ್ಟ್ ಪ್ರೈವೇಟ್ ಲಿಮಿಟೆಡ್, ಹೈದರಾಬಾದ್ ಸಂಸ್ಥೆಗಳ ಸಹಯೋಗದಲ್ಲಿ ಕೋಟುಮಚಗಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ 157 ವಿದ್ಯಾರ್ಥಿಗಳಿಗೆ ಶಾಲಾ ಬ್ಯಾಗ್, ನೋಟ್‌ಪುಸ್ತಕ, ಪೆನ್ ಹಾಗೂ ಪೆನ್ಸಿಲ್ ಕಿಟ್‌ಗಳನ್ನು ವಿತರಿಸಲಾಯಿತು. ಶನಿವಾರ ನಡೆದ ಕಾರ್ಯಕ್ರಮದಲ್ಲಿ ಎಸ್‌ಡಿಎಂಸಿ ಅಧ್ಯಕ್ಷರು, ಗ್ರಾಮ ಪಂಚಾಯಿತಿ ಸದಸ್ಯರು, ಶಾಲೆಯ ಪ್ರಧಾನ ಶಿಕ್ಷಕರು ಹಾಗೂ ದ್ವಾರಕಾಮಾಯಿ ಫೌಂಡೇಶನ್‌ನ ಆಡಳಿತಾಧಿಕಾರಿ ಖಾಜಾವಾಲಿ ಮುಲ್ಲಾ ಅವರು ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಕಿಟ್‌ಗಳನ್ನು ವಿತರಿಸಿ ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಅಧ್ಯಕ್ಷರು ಮತ್ತು ಸದಸ್ಯರು, ಶಾಲೆಯ ಪ್ರಧಾನ ಗುರುಮಾತೆ ಎನ್.ಎಸ್. ನೋಡೆವಾಲೆ, ಸಹ ಶಿಕ್ಷಕರು, ದ್ವಾರಕಾಮಾಯಿ ಫೌಂಡೇಶನ್‌ನ ಆಡಳಿತಾಧಿಕಾರಿ ಖಾಜಾವಾಲಿ ಮುಲ್ಲಾ, ಗಣೇಶ ಚವಡಿ, ಬಸವರಾಜ ಕಟಗಿ ಹಾಗೂ ಶಾಲೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಗುಪ್ತ ನವರಾತ್ರಿಯಲ್ಲಿ ದಶಮಾವಿದ್ಯೆ ಸಾಧನಾ ಮಂಗಲೋತ್ಸವ

**ವಿಜಯಸಾಕ್ಷಿ ಸುದ್ದಿ, ಗದಗ**

ಆಷಾಢ ಮಾಸದ ಗುಪ್ತ ನವರಾತ್ರಿ ಅಂಗವಾಗಿ ಗದಗ ತಾಲೂಕಿನ ನರಸಾಪೂರ ಗ್ರಾಮದ ರಂಭಾಪುರಿ ಶಾಖಾಮಠದಲ್ಲಿ ಡಾ. ವೀರಭದ್ರ ಶಿವಾಚಾರ್ಯ ಸ್ವಾಮೀಜಿ ಅವರ ಸಾನ್ನಿಧ್ಯದಲ್ಲಿ ಮೌನಾನುಷ್ಠಾನ, ಜಲಾನುಷ್ಠಾನ ಹಾಗೂ ದಶಮಾವಿದ್ಯೆ ಸಾಧನಾ ಜಪಾನುಷ್ಠಾನದ ಮಂಗಲೋತ್ಸವ ಭಕ್ತಿಭಾವದಿಂದ ನೆರವೇರಿತು.

ಕಾರ್ಯಕ್ರಮದಲ್ಲಿ ಡಾ. ವೀರಭದ್ರ ಶಿವಾಚಾರ್ಯ ಸ್ವಾಮೀಜಿ ಆಶೀರ್ವಚನ ನೀಡಿದರು.

ಕುಮಾರಸ್ವಾಮಿ ಹಿರೇಮಠ ಅಧ್ಯಕ್ಷತೆ ವಹಿಸಿದ್ದರು. ಕಲ್ಲಯ್ಯ ಹಿರೇಮಠ ನೇತೃತ್ವ ವಹಿಸಿದ್ದರು.

ಈ ಸಂದರ್ಭದಲ್ಲಿ ಹಿಂದೂ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ರಾಜು ಖಾನಪ್ಪನವರ, ಗುಂಡದ ಮಾರುತಿ ದೇವಸ್ಥಾನದ ಅಧ್ಯಕ್ಷ ಶಿವಪ್ಪ ತೊಂಡಿಹಾಳ, ಈಶ್ವರ ಹಿರೇಮಠ ಸೇರಿದಂತೆ ಭಕ್ತರು ಉಪಸ್ಥಿತರಿದ್ದರು.

---

### ಗುರುಪೂರ್ಣಿಮೆ ಅಂಗವಾಗಿ ಜೋಳಿಗೆ ಭಿಕ್ಷೆ | ದವಸ-ಧಾನ್ಯ ಸಮರ್ಪಿಸಿ ಭಕ್ತಿ ಸಮರ್ಪಣೆ

# ಬಾಬಾ ಜೋಳಿಗೆಗೆ ಭಕ್ತರ ಸಂಕಲ್ಪದ ಕಾಣಿಕೆ



**ವಿಜಯಸಾಕ್ಷಿ ಸುದ್ದಿ, ಗದಗ**

ಗುರುಪೂರ್ಣಿಮೆ ಅಂಗವಾಗಿ ಗದಗದ ಶ್ರೀ ಶಿರಡಿ ಸಾಯಿಬಾಬಾ ಸತ್ಸಂಗ (ರಿ.) ಸಮಿತಿ ವತಿಯಿಂದ ಭಾನುವಾರ ನಗರದ ವಿವಿಧ ಬಡಾವಣೆಗಳಲ್ಲಿ ಶ್ರೀ ಸಾಯಿಬಾಬಾ ಜೋಳಿಗೆ ಭಿಕ್ಷಾ ಕಾರ್ಯಕ್ರಮ ಭಕ್ತಿಭಾವದಿಂದ ನಡೆಯಿತು.

ಬೆಳಿಗ್ಗೆ ಶ್ರೀ ಸಾಯಿಬಾಬಾ ಮಂದಿರದಲ್ಲಿ ವಿಶೇಷ ಪೂಜೆ ಸಲ್ಲಿಸಿದ ಸತ್ಸಂಗ ಸಮಿತಿಯ ಪದಾಧಿಕಾರಿಗಳು ಹಾಗೂ ಗುರುಹಿರಿಯರು ಬಾಬಾ ಅವರಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಿ, ಸಂಕಲ್ಪದೊಂದಿಗೆ ಜೋಳಿಗೆ ಭಿಕ್ಷಾ ಕೈಂಕರ್ಯಕ್ಕೆ ಚಾಲನೆ ನೀಡಿದರು.

ಸಾಯಿ ಮಂದಿರದಿಂದ ಆರಂಭವಾದ ಭಿಕ್ಷಾ ಕಾರ್ಯಕ್ರಮವು ವಿವೇಕಾನಂದ ಬಡಾವಣೆ, ಕರಿಯಮ್ಮಕಲ್ಲ ಬಡಾವಣೆ ಸೇರಿದಂತೆ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ, ಮಧ್ಯಾಹ್ನ ಶ್ರೀ ರಾಘವೇಂದ್ರ ಮಠದ ಮಾರ್ಗವಾಗಿ ಮತ್ತೆ ಸಾಯಿ ಮಂದಿರಕ್ಕೆ ತಲುಪಿತು.

ಮಾರ್ಗದುದ್ದಕ್ಕೂ ಭಕ್ತರು ಜೋಳಿಗೆಗೆ ತಮ್ಮ ಸಂಕಲ್ಪದ ಕಾಣಿಕೆ, ದವಸ-ಧಾನ್ಯ ಹಾಗೂ ಪ್ರಸಾದಕ್ಕೆ ಅಗತ್ಯವಿರುವ ಆಹಾರ ಪದಾರ್ಥಗಳನ್ನು ಸಮರ್ಪಿಸಿ ಭಕ್ತಿ ಸಮರ್ಪಿಸಿದರು.

ಈ ನಡುವೆ ಜುಲೈ 19ರಿಂದ ಪ್ರತಿದಿನ ಸಂಜೆ ಡಾ. ಎಸ್.ಬಿ. ಶೆಟ್ಟರ ಅವರಿಂದ ನಡೆಯುತ್ತಿರುವ ಶ್ರೀಸಾಯಿ ಸಚ್ಚರಿತ್ರೆ ಪ್ರವಚನ ಮಾಲಿಕೆ ಜುಲೈ 29ರಂದು ಸಮಾರೋಪಗೊಳ್ಳಲಿದೆ.

ಅಂದು ಗುರುಪೂರ್ಣಿಮೆ ಅಂಗವಾಗಿ ಬೆಳಿಗ್ಗೆ ಕಾಕಡಾರತಿ, ಮಂಗಳಸ್ನಾನ, ರುದ್ರಾಭಿಷೇಕ, ಅಲಂಕಾರ ಪೂಜೆ, ಪಂಚಾರತಿ, ಪುಷ್ಪಾರ್ಚನೆ ಹಾಗೂ ಮಹಾ ಅನ್ನಸಂತರ್ಪಣೆ ನಡೆಯಲಿದೆ. ಸಂಜೆ ಸಾಮೂಹಿಕ ಶ್ರೀ ಸತ್ಯನಾರಾಯಣ ಪೂಜೆ, ಧೂಪಾರತಿ, ಪಲ್ಲಕ್ಕಿ ಉತ್ಸವ ಹಾಗೂ ಶೇಜಾರತಿಯೊಂದಿಗೆ ಗುರುಪೂರ್ಣಿಮೆ ಮಹೋತ್ಸವ ಸಂಪನ್ನವಾಗಲಿದೆ ಎಂದು ಶ್ರೀ ಶಿರಡಿ ಸಾಯಿಬಾಬಾ ಸತ್ಸಂಗ (ರಿ.) ಸಮಿತಿ ಪ್ರಕಟಣೆಯಲ್ಲಿ ತಿಳಿಸಿದೆ.

---

### ಜಿಲ್ಲಾ ಮಹಿಳಾ ಪೊಲೀಸ್ ಠಾಣೆಯ ಅಕ್ಕ ಪಡೆ ಯಿಂದ ಸರ್ಕಾರಿ ಉರ್ದು ಶಾಲೆಯಲ್ಲಿ ಸುರಕ್ಷತಾ ಅರಿವು ಕಾರ್ಯಕ್ರಮ

# ಮಕ್ಕಳ ಸುರಕ್ಷತೆಗೆ ಜಾಗೃತಿ ಅತ್ಯಗತ್ಯ

**ವಿಜಯಸಾಕ್ಷಿ ಸುದ್ದಿ, ಗದಗ**

ಮಹಿಳೆಯರು ಹಾಗೂ ಮಕ್ಕಳ ಸುರಕ್ಷತೆ ಪ್ರತಿಯೊಬ್ಬರ ಆದ್ಯ ಕರ್ತವ್ಯವಾಗಿದ್ದು, ಕುಟುಂಬ, ಶಾಲೆ ಹಾಗೂ ಸಮಾಜದ ಸಹಕಾರದಿಂದ ಮಾತ್ರ ಸುರಕ್ಷಿತ ಸಮಾಜ ನಿರ್ಮಾಣ ಸಾಧ್ಯ ಎಂದು ಸಂಪನ್ಮೂಲ ವ್ಯಕ್ತಿ ಕವಿತಾ ದಂಡಿನ ಹೇಳಿದರು.

ನಗರದ ಸರ್ಕಾರಿ ಮಾದರಿ ಉರ್ದು ಕೇಂದ್ರ ಶಾಲೆ ನಂ. 2ರಲ್ಲಿ ಜಿಲ್ಲಾ ಮಹಿಳಾ ಪೊಲೀಸ್ ಠಾಣೆಯ ಅಕ್ಕ ಪಡೆ ವತಿಯಿಂದ ಶಿಕ್ಷಕರು ಹಾಗೂ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಮಕ್ಕಳ ಸುರಕ್ಷತೆ ತಿಳುವಳಿಕೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಶಾಲೆಯಲ್ಲಿ ಸುರಕ್ಷಿತ ಹಾಗೂ ಭಯರಹಿತ ಕಲಿಕಾ ವಾತಾವರಣ ನಿರ್ಮಿಸುವುದು, ಶಾಲೆಗೆ ಬರುವಾಗ ಹಾಗೂ ಮನೆಗೆ ಹಿಂದಿರುಗುವಾಗ ಸುರಕ್ಷತಾ ಕ್ರಮಗಳನ್ನು ಪಾಲಿಸುವುದು, ಅಪರಿಚಿತರೊಂದಿಗೆ ಸ್ನೇಹ ಬೆಳೆಸದೇ ಇರುವುದು, ಆನ್‌ಲೈನ್ ಸುರಕ್ಷತೆ, ಗುಡ್ ಟಚ್‌ಬ್ಯಾಡ್ ಟಚ್ ಕುರಿತು ಮಕ್ಕಳಿಗೆ ಅರಿವು ಮೂಡಿಸಿದರು.

ಕ್ಷೇತ್ರ ಸಂಪನ್ಮೂಲ ವ್ಯಕ್ತಿ ಮಹಮದ್‌ಶಫಿ ಯರಗುಡಿ ಮಾತನಾಡಿ, ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕೆ ಶಿಕ್ಷಣದ ಜೊತೆಗೆ ಸುರಕ್ಷಿತ ಹಾಗೂ ಸ್ನೇಹಪರ ವಾತಾವರಣವೂ ಅಗತ್ಯವಾಗಿದೆ. ಯಾವುದೇ ರೀತಿಯ ಕಿರುಕುಳ ಅಥವಾ ತೊಂದರೆ ಎದುರಾದರೆ ಪಾಲಕರು ಅಥವಾ ಶಿಕ್ಷಕರಿಗೆ ಧೈರ್ಯವಾಗಿ ತಿಳಿಸಬೇಕು ಎಂದು ಸಲಹೆ ನೀಡಿದರು. ಅಕ್ಕ ಪಡೆಯ ಮುಖ್ಯಸ್ಥೆ ಶಂಕ್ರಮ್ಮ ಕೊರವರ ಮಾತನಾಡಿ, ವಿದ್ಯಾರ್ಥಿಗಳು ತಮ್ಮ ಸುರಕ್ಷತೆಗೆ ಮೊದಲ ಆದ್ಯತೆ ನೀಡಬೇಕು. ಅಪರಿಚಿತರು ನೀಡುವ ಆಹಾರ ಅಥವಾ ಚಾಕೊಲೇಟ್‌ಗಳನ್ನು ಸ್ವೀಕರಿಸಬಾರದು. ಶಾಲೆಯಿಂದ ಮನೆಗೆ ತೆರಳುವಾಗ ಒಂಟಿಯಾಗಿ ಹೋಗದೆ ಸ್ನೇಹಿತರೊಂದಿಗೆ ತೆರಳುವ ಅಭ್ಯಾಸ ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು.

ಶಾಲೆಯ ಮುಖ್ಯೋಪಾಧ್ಯಾಯಿನಿ ಎಸ್.ಎಚ್. ಸರಖವಾಸ್ ಮಾತನಾಡಿ, ಶಾಲೆಯಲ್ಲಿ ಪ್ರತಿದಿನ ಪ್ರಾರ್ಥನಾ ವೇಳೆಯಲ್ಲಿ ಮಕ್ಕಳ ಸುರಕ್ಷತೆ ಹಾಗೂ ಸಹಾಯವಾಣಿ ಸಂಖ್ಯೆಗಳ ಬಗ್ಗೆ ಮಾಹಿತಿ ನೀಡಲಾಗುತ್ತಿದೆ. ಪಾಲಕರ ಸಭೆಗಳಲ್ಲಿಯೂ ಈ ಕುರಿತು ಜಾಗೃತಿ ಮೂಡಿಸಲಾಗುತ್ತಿದ್ದು, ಮಕ್ಕಳು ಮೊಬೈಲ್ ಬಳಕೆಯಿಂದ ದೂರವಿರಬೇಕು ಎಂದು ಹೇಳಿದರು. ಶಿಕ್ಷಕರಾದ ಎನ್.ಬಿ. ಕರ್ಲವಾಡ ಸ್ವಾಗತಿಸಿದರು. ಎಸ್.ವಿ. ಜಕ್ಕನಗೌಡ ನಿರೂಪಿಸಿದರು. ಡಬ್ಲ್ಯು.ಎ. ಶಿರಹಟ್ಟಿ ವಂದಿಸಿದರು. ಮಹಿಳಾ ಪೊಲೀಸ್ ಠಾಣೆಯ ಸಿಬ್ಬಂದಿಗಳಾದ ಸುಧಾ ಪಾಟೀಲ, ಉಮಾ ಕನ್ಯಾಳಹಿರೇಮಠ ಹಾಗೂ ಶಿಕ್ಷಕರಾದ ಶಾಂತಲಾ ಜಂಗಮನಿ, ಜಾಯ್ಸ್ ಜೆ., ವಿಜಯಕುಮಾರ ಲಕ್ಷ್ಮಣನಾಯಕ ಉಪಸ್ಥಿತರಿದ್ದರು.

> **ಮಹಿಳೆಯರು ಹಾಗೂ ಮಕ್ಕಳ ಸುರಕ್ಷತೆ ಕೇವಲ ಪೊಲೀಸರ ಜವಾಬ್ದಾರಿ ಅಲ್ಲ; ಕುಟುಂಬ, ಶಾಲೆ ಮತ್ತು ಸಮಾಜ ಎಲ್ಲರೂ ಕೈಜೋಡಿಸಿದಾಗ ಮಾತ್ರ ಸುರಕ್ಷಿತ ವಾತಾವರಣ ನಿರ್ಮಿಸಲು ಸಾಧ್ಯ.**
>
> **- ಕವಿತಾ ದಂಡಿನ,**
> ಸಂಪನ್ಮೂಲ ವ್ಯಕ್ತಿ



---

# ಸಾಯಿಬಾಬಾ ವಿಶ್ವಮಾನವೀಯತೆಯ ಮಹಾನ್ ಸಂತ

**ವಿಜಯಸಾಕ್ಷಿ ಸುದ್ದಿ, ಗದಗ**

ಶಿರಡಿ ಸಾಯಿಬಾಬಾ ಯಾವುದೇ ಒಂದು ಧರ್ಮದ ಪ್ರಚಾರಕರಲ್ಲ. ಅವರು ಮಾನವ ಧರ್ಮದ ಮಹಾಗುರು. ಸಬ್ ಕಾ ಮಾಲಿಕ್ ಏಕ್ ಎಂಬ ಸಂದೇಶದ ಮೂಲಕ ವಿಶ್ವಮಾನವೀಯತೆ, ಪ್ರೀತಿ, ದಯೆ, ಕರುಣೆ ಹಾಗೂ ಸಮಾನತೆಯ ಬದುಕನ್ನು ಬೋಧಿಸಿದ ಮಹಾನ್ ಸಂತರು ಎಂದು ಗದಗದ ಹಿರಿಯ ಚಿಂತಕ ಹಾಗೂ ವೈದ್ಯ ಡಾ. ಸಂಗಮನಾಥ ಬಿ. ಶೆಟ್ಟರ ಹೇಳಿದರು.

ನಗರದ ಶ್ರೀ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಗದಗ-ಬೆಟಗೇರಿ ಶ್ರೀ ಶಿರಡಿ ಸಾಯಿಬಾಬಾ ಸತ್ಸಂಗ ವತಿಯಿಂದ ಗುರುಪೂರ್ಣಿಮೆ ಅಂಗವಾಗಿ ಆಯೋಜಿಸಿದ್ದ ಶ್ರೀಸಾಯಿ ಸಚ್ಚರಿತ್ರೆ ಆಧ್ಯಾತ್ಮಿಕ ಪ್ರವಚನ ಮಾಲಿಕೆಯಲ್ಲಿ ಅವರು ಮಾತನಾಡಿದರು. ಸಾಯಿಬಾಬಾ ತಮ್ಮ ಬದುಕಿನಲ್ಲಿ ಮೂರ್ತಿ ಅಥವಾ ಫೋಟೋ ಪೂಜೆಯನ್ನು ಪ್ರೋತ್ಸಾಹಿಸಲಿಲ್ಲ. ಭಕ್ತನ ನಿಷ್ಕಪಟ ನಂಬಿಕೆಯೇ ದೈವಾನುಭವಕ್ಕೆ ಕಾರಣವಾಗುತ್ತದೆ ಎಂಬುದನ್ನು ಹಲವು ಪ್ರಸಂಗಗಳ ಮೂಲಕ ಬೋಧಿಸಿದ್ದರು ಎಂದು ಡಾ. ಶೆಟ್ಟರ ವಿವರಿಸಿದರು. ಅಲಿ ಅಹಮದ್ ಅವರು ಮುದ್ರಿಸಿದ್ದ ಸಾಯಿ ಬಾಬಾರ ಭಾವಚಿತ್ರಗಳು, ಮೌಲಾನಾ ಇಸು ಮುಜಾವರ್ ಅವರಿಗೆ ದೊರೆತ ದಿವ್ಯಾನುಭವ ಹಾಗೂ ಸಾಹೇಬ್ ಎಂಬ ಭಕ್ತನಿಗೆ ಬಾಬಾ ನೀಡಿದ ಆಧ್ಯಾತ್ಮಿಕ ಮಾರ್ಗದರ್ಶನದ ಪ್ರಸಂಗ ಗಳನ್ನು ಅವರು ವಿವರಿಸಿದರು. ಈ ಸಂದರ್ಭದಲ್ಲಿ ಪ್ರಸಾದ ಸೇವೆಯ ಜವಾಬ್ದಾರಿ ವಹಿಸಿಕೊಂಡಿದ್ದ ಚೈತ್ರಾ ಶೆಟ್ಟರ, ಜಿ.ವಿ. ಪಾಟೀಲ, ಎಸ್.ಎ. ಯಲಬುರ್ಗಿ, ವೀರಯ್ಯ ಹಿರೇಮಠ, ಶಿಲ್ಪಾ ಬೆಂಗಳೂರು, ಲಲಿತಾ ಜಗದಾಳ, ಅಶೋಕ ಕರವೀರಶೆಟ್ಟರ, ಲಕ್ಷ್ಮೀ ಮಲಹೋಳಿ, ಅನಿತಾ ತೋಟಗಂಟಿಮಠ, ಸ್ನೇಹಾ ಹಿರೇಮಠ ಹಾಗೂ ಅದ್ವೈತ ಯರಗೇರಿ ಕುಟುಂಬವನ್ನು ಸನ್ಮಾನಿಸಲಾಯಿತು.

> **ಸಾಯಿಬಾಬಾ ಯಾವುದೇ ಧರ್ಮದ ಪ್ರಚಾರಕರಲ್ಲ; ಸಬ್ ಕಾ ಮಾಲಿಕ್ ಏಕ್ ಎಂಬ ಸಂದೇಶದ ಮೂಲಕ ವಿಶ್ವಮಾನವೀಯತೆ, ಪ್ರೀತಿ ಮತ್ತು ಸಮಾನತೆಯ ಬದುಕನ್ನು ಬೋಧಿಸಿದ ಮಹಾನ್ ಸಂತರು.**
>
> **- ಡಾ. ಸಂಗಮನಾಥ ಬಿ. ಶೆಟ್ಟರ,**
> ಹಿರಿಯ ಚಿಂತಕ ಮತ್ತು ವೈದ್ಯ

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka